ಸಂಪುಟ : 10 ಸಂಚಿಕೆ: 33 ಪುಟ : 4+2 ಬೆಲೆ: 3.00 ಮಂಗಳವಾರ ಮಾರ್ಚ 4 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 33 Pages : 4+2 Price : 3.00 Tuesday March 4 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 04 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 6-ರೇಣುಕಾಚಾರ್ಯ ಕಲ್ಯಾಣ ಮಂಟಪ, ಬಾಳಿಕಾಯಿ ಹೊನ್ನಪ್ಪ ಅವರ ಲೈನ್, ಪಾಟೀಲ್‌ರ ಲೈನ್, ಹನುಮಂತ ದೇವರಗುಡಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ.16, 21 – ಕುಷ್ಠರೋಗ ಕಾಲೋನಿ, ಕುಂಬೇಶ್ವರ ನಗರ ಸುಣ್ಣದ ಭಟ್ಟಿ, ಅಂಬೇಡ್ಕರ್ ನಗರದ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 27, 28 – ಮಲ್ಲಾಡದ ಅವರ ಲೈನ್, ಸ್ಟೇಡಿಯಂ ಹೊಸಮನಿಯವರ ಲೈನ್, ರೊಟ್ಟಿ ಲೇಔಟ್, ತಂಬ್ರಳ್ಳಿಮಠ ಲೈನ್, ಕೊಪ್ಪದ ಅವರ ಲೈನ್, ಜಿ.ಎಸ್. ಪಾಟೀಲ್ ಲೈನ್, ನಾಗರಕಟ್ಟಿ ಲೈನ್, ಎಸ್. ಎಸ್. ಪಾಟೀಲರ ಉಳಿದ ಭಾಗಗಳು

ವಾರ್ಡ್ ನಂ. 22ರ ಗಂಗಿಮಡಿ 1ರಿಂದ 5 ಲೈನ್‌ಗಳು ಅಕ್ಕಿಯವರ, ಪಾಮಡಿಯವರ ಲೈನ್, ನಿಂಗಪ್ಪನ ಲೈನ್, ಸ್ವಾಮಿಯವರ ಲೈನ್, ಸಫಾರಿಯವರ ಲೈನ್, ವಾರ್ಡ್ ನಂ. 4ರಲ್ಲಿ ಹುಯಿಲಗೋಳ ರಸ್ತೆ ಬಲಭಾಗ, ಪೂರ್ತಿ, ಟರ್ನಲ್ ಪೇಟೆ, ಮಾಜಿ ಮೆಂಬರ್ ಲೈನ್, ಗೌರಿಗುಡಿ, ಬ್ಯಾಳಿಯವರ ಲೈನ್, ಬಿಂಕದಕಟ್ಟಿ ಅವರ ಲೈನ್, ಮಂಜುನಾಥ ನಗರ, ಬಿ.ಎಸ್. ಎನ್.ಎಲ್. ಆಫೀಸ್ 200 ಮನೆ 270 ಮನೆ, ಕಣವಿ ಪ್ಲಾಟ್ ವಿವಿಧ ಉಳಿದ ಭಾಗಗಳು, ವಾರ್ಡ್ ನಂ. 30, 34 ವಡ್ಡರಗೇರಿ ಮೂರಶಿಳ್ಳಿನ ವಕಾರ, 46 ಪ್ಲಾಟ್, ಶಿವಾನಂದ ಗಾರ್ಡನ್, ಡಿಪೋ ಹಿಂದಿನ ಭಾಗ, ಹೂಗಾರ ಪ್ಲಾಟ್ ಮಸೂತಿ ಲೈನ್, ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು.

ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಜಿಲ್ಲೆಯಲ್ಲಿ ಭಾರೀ ಸ್ಪಂದನೆ ಪಡೆದ ಉದ್ಯೋಗ ಮೇಳ-2025

# 827 ಅಭ್ಯರ್ಥಿಗಳು ಕೆಲಸ ಪಡೆಯುವಲ್ಲಿ ಸಫಲ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೌಶಲ್ಯಾಭಿವೃದ್ಧಿ ಇಲಾಖೆ ಮತ್ತು ಇತರೆ ಇಲಾಖೆಗಳಿಂದ ಆಯೋಜಿಸಿದ ಗದಗ ಜಿಲ್ಲಾ ಉದ್ಯೋಗ ಮೇಳ-2025 ಪ್ರಭುತ್ವ ಉದ್ಯೋಗಾಕಾಂಕ್ಷಿಗಳಿಂದ ಭಾರೀ ಸ್ಪಂದನೆ ಕಂಡಿತು.

ಉದ್ಯೋಗ ಮೇಳಕ್ಕೆ ಆಫ್‌ಲೈನ್ ಹಾಗೂ ಆನ್‌ಲೈನ್ ಮೂಲಕ 6243 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಮೇಳದಲ್ಲಿ ಸಂದರ್ಶನಕ್ಕೆ ಹಾಜರಾದ 4089 ಅಭ್ಯರ್ಥಿಗಳ ಪೈಕಿ 827 ಅಭ್ಯರ್ಥಿಗಳು ಕೆಲಸ ಗಿಟ್ಟಿಸಿಕೊಳ್ಳುವಲ್ಲಿ ಸಫಲರಾಗಿದ್ದಾರೆ.

ಸಂದರ್ಶನದಲ್ಲಿ 1067 ಅಭ್ಯರ್ಥಿಗಳು ಶಾರ್ಟ್ ಲಿಸ್ಟ್‌ಗೆ ಆಯ್ಕೆಯಾಗಿದ್ದಾರೆ. ಆಯ್ಕೆಯಾದ ಅಭ್ಯರ್ಥಿಗಳ ಪೈಕಿ 12 ಅಭ್ಯರ್ಥಿಗಳು ಕೆಲಸಕ್ಕೆ ಹಾಜರಾಗಲು ರವಿವಾರವೇ ಬೆಂಗಳೂರಿಗೆ ತೆರಳಿದ್ದು, ಈ ವಾಹನಕ್ಕೆ ಸಚಿವ ಎಚ್.ಕೆ. ಪಾಟೀಲ ಚಾಲನೆ ನೀಡಿದರು.

ಉದ್ಯೋಗ ಮೇಳಕ್ಕೆ ಗದಗ ಜಿಲ್ಲೆಯ ಯುವಕರು ಹಾಗೂ ಮಹಿಳೆಯರಿಂದ ಉತ್ತಮ ಪ್ರತಿಕ್ರಿಯೆ




ವ್ಯಕ್ತವಾಗಿದೆ. ವಿವಿಧ ಖಾಸಗಿ ಹಾಗೂ ಸರಕಾರಿ ಕಂಪನಿಗಳು ತಮ್ಮ ಉದ್ಯೋಗಾವಕಾಶಗಳನ್ನು ಇಲ್ಲಿ ಪ್ರಸ್ತುತಪಡಿಸಿದ್ದು, ಹಲವರು ತಕ್ಷಣವೇ ಉದ್ಯೋಗ ಪಡೆಯುವಂತಾಗಿದೆ.

ಹತ್ತಾರು ಕಂಪನಿಗಳು ಪಾಲ್ಗೊಂಡು ವಿವಿಧ ಕ್ಷೇತ್ರಗಳ ಉದ್ಯೋಗಗಳಿಗಾಗಿ ಸಂದರ್ಶನ ನಡೆಸಿದವು. ಆಕರ್ಷಕ ವೇತನ, ತರಬೇತಿ ಹಾಗೂ ಕರಿಯರ್ ಗ್ರೋಥ್ ಅವಕಾಶಗಳೊಂದಿಗೆ ಯುವ ಪ್ರತಿಭೆಗಳಿಗೆ ದಾರಿ ತೆರೆಯಲಾಯಿತು.

ಸಮಾರೋಪ ಸಮಾರಂಭದ ವೇದಿಕೆಯಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಕೃಷ್ಣಗೌಡ ಪಾಟೀಲ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಮಹೇಶ್ ಪೋತದಾರ, ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಡಾ. ಮಲ್ಲೂರ ಬಸವರಾಜ್ ಸೇರಿದಂತೆ ಇತರರು ಇದ್ದರು.

> ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ಪೂರ್ಣಗೊಂಡಿತು. ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ಜನಪ್ರತಿನಿಧಿಗಳು ಈ ಮೇಳ ಯಶಸ್ವಿಯಾಗಿದ್ದಕ್ಕೆ ಸಂತೋಷ ವ್ಯಕ್ತಪಡಿಸಿದ್ದು, ಈ ರೀತಿಯ ಕಾರ್ಯಕ್ರಮಗಳನ್ನು ಮುಂದುವರೆಸಲಾಗುವುದು ಎಂದು ಭರವಸೆ ನೀಡಿದ್ದಾರೆ.

### ಸಿಎಂ ಬದಲಾವಣೆ ಕುರಿತು ಭವಿಷ್ಯ ನುಡಿದ ಕೋಡಿಶ್ರೀ

# ಸಿದ್ದರಾಮಯ್ಯರ ಅಧಿಕಾರ ಕಿತ್ತುಕೊಳ್ಳುವುದು ಕಷ್ಟ

■ವಿಜಯಸಾಕ್ಷಿ ಸುದ್ದಿ, ಗದಗ

ಸಿಎಂ ಸಿದ್ದರಾಮಯ್ಯರಿಂದ ಅಧಿಕಾರ ಕಿತ್ತುಕೊಳ್ಳಲಾಗುವುದಿಲ್ಲ. ಸಿದ್ದರಾಮಯ್ಯ ಪೂರ್ಣಾವಧಿಗೆ ಮುಖ್ಯಮಂತ್ರಿಗಳಾಗಿರುತ್ತಾರೆ. ಹಾಲುಮತ ಸಮಾಜಕ್ಕೆ ಅಧಿಕಾರ ಬಂದರೆ ಸುಲಭವಾಗಿ ಕಿತ್ತುಕೊಳ್ಳಲು ಆಗುವುದಿಲ್ಲ. ಇವತ್ತಿನ ರಾಜಕೀಯ ಚಿಂತನೆ ಮಾಡುವುದಾದರೆ, ಈ ಮುಖ್ಯಮಂತ್ರಿ ಇರುವವರೆಗೂ ಅಧಿಕಾರ ಕಿತ್ತುಕೊಳ್ಳುವುದು ಕಷ್ಟ. ನಾವು ಹೇಳಿದ್ದು ಕೇವಲ ವ್ಯಕ್ತಿಯ




ಚಿಂತನೆ ಅಲ್ಲ, ಸಮಗ್ರ ಭವಿಷ್ಯದ ಚಿಂತನೆ ಎಂದು ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಭವಿಷ್ಯ ನುಡಿದರು.

ಗದುಗಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಬಗ್ಗೆ ಒಳ್ಳೆಯ ಅಭಿಪ್ರಾಯ ನಮಗಿದೆ. ಬದಲಾವಣೆ ಕುರಿತು, ಯುಗಾದಿ ನಂತರ ಅದರ ಬಗ್ಗೆ ಹೇಳಬಹುದು. ಡಿ.ಕೆ. ಶಿವಕುಮಾರ್ ಒಕ್ಕಲಿಗರು, ಒಕ್ಕಲಿಗರು ಅನ್ನದಾತರು. ಅವರನ್ನು ಇಡೀ ಜಗತ್ತು ಮರೆಯುವುದಿಲ್ಲ. ಇದಕ್ಕೆ ಜಾತಿ ಲೇಪನ ಹಚ್ಚುವುದು ಬೇಡ. ಹಾಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಬಗ್ಗೆ ನಮಗೆ ದುರಾಭಿಮಾನ ಇಲ್ಲ. ಅವರ ಬಗ್ಗೆ ಅಭಿಮಾನ ಇದೆ, ಮೊದಲಿನಿಂದಲೂ ಹೋರಾಟ ಮಾಡಿಕೊಂಡು ಬಂದಿದ್ದಾನೆ ಎಂದರು. ಇನ್ನೂ ರಾಷ್ಟ್ರ ರಾಜಕಾರಣದಲ್ಲಿ ರಾಜಕೀಯದ ಸುನಾಮಿ ಆಗುವ ಲಕ್ಷಣಗಳು ಬಹಳಷ್ಟಿವೆ ಎಂದರು.

> ಈ ವರ್ಷ ಕರ್ನಾಟಕಕ್ಕೆ ಮಳೆ-ಬೆಳೆ ತೊಂದರೆ ಇಲ್ಲ. ಶುಭಯೋಗವಿದೆ. ಆದರೆ ಪ್ರಾಕೃತಿಕ ದೋಷಗಳು ಬಹಳ ಇವೆ. ಭೂಕಂಪ, ಭೂಮಿ ಸುನಾಮಿ, ವಾಯು ಸುನಾಮಿ ಆಗುವದಿದೆ. ಕಳೆದ ಬಾರಿಗಿಂತ ಈ ಬಾರಿ ಪ್ರಾಕೃತಿಕ ದೋಷಗಳು ಹೆಚ್ಚಿವೆ. ಬಿಸಿಲ ಧಗೆ ಹೆಚ್ಚಲಿದೆ. ಹಿಮಪಾತ ಆಗುತ್ತದೆ. ಪ್ರಾಕೃತಿಕ ದೋಷವೇ ಮತ್ತೊಂದು ಕೊರೋನಾ ಆಗಿ ಬರಲಿದೆ. ಮುಂಬರುವ ಸಂವತ್ಸರ ಕೆಟ್ಟದೇನಲ್ಲ, ಚೆನ್ನಾಗಿದೆ ಎಂದು ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಭವಿಷ್ಯ ನುಡಿದರು.

## ಕನ್ನಡ ಫಿಲಂ ಚೆಂಬರ್ ನಿಂದ 'ಯುವರತ್ನ ಪ್ರಶಸ್ತಿ' ಘೋಷಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತದ ಸಂವಿಧಾನ ಪುಸ್ತಕ ಸಂಪಾದಕ ಹಾಗೂ ಗದಗ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ವೆಂಕಟೇಶ್ ವಾಲ್ಮೀಕಿಯವರಿಗೆ ಕನ್ನಡ ಫಿಲಂ ಚೆಂಬರ್ ನಿಂದ ಮಾರ್ಚ್ 23 ರಂದು ಡಾ ಪುನೀತರಾಜಕುಮಾರ ಹುಟ್ಟುಹಬ್ಬದ ಅಂಗವಾಗಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯುವ ರಾಜ್ಯ ಮಟ್ಟದ ಪ್ರಶಸ್ತಿ ಸಮಾರಂಭದಲ್ಲಿ ಯುವ ಸಾಧಕರಿಗೆ ನೀಡುವ 'ಯುವ ರತ್ನ 'ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಕನ್ನಡ ಫಿಲಂ ಚೆಂಬರ್ ಪ್ರಕಟಣೆಯಲ್ಲಿ ತಿಳಿಸಿದೆ.

# ಪಠ್ಯೇತರ ಚಟುವಟಿಕೆಗಳಿಂದ ವ್ಯಕ್ತಿತ್ವ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವ ವಿಕಸನಕ್ಕೆ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದು ತುಂಬಾ ಅವಶ್ಯಕ ಎಂದು ಜಿಲ್ಲಾ ಬಾಲಭವನ ಘಟಕದ ಸಂಯೋಜಕ ರವಿ ಉಮಚಗಿ ಹೇಳಿದರು.

ಅವರು ಸರಕಾರಿ ಮಾದರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ಜಿಲ್ಲಾ ಬಾಲಭವನ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ವಿವಿಧ ಚಟುವಟಿಕೆಗಳನ್ನು ಉದ್ಘಾಟಿಸಿ ಮಾತನಾಡಿ, ಮಕ್ಕಳು ಪ್ರಾಥಮಿಕ ಹಂತದಲ್ಲಿ ಪಠ್ಯೇತರ ಚಟುವಟಿಕೆಗಳಾದ ಚಿತ್ರಕಲೆ, ಭಾವಗೀತೆ, ಜಾನಪದ ಗೀತೆ, ದೇಶಭಕ್ತಿಗೀತೆ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಬೇಕು. ಇದರಿಂದ



ಉತ್ತಮ ವ್ಯಕ್ತಿತ್ವ ರೂಪುಗೊಳ್ಳುತ್ತದೆ ಎಂದರು. ಎಸ್‌ಡಿಎಮ್‌ಸಿ ಅಧ್ಯಕ್ಷ ಮಹಾಂತೇಶ ಕಣವಿ ಅಧ್ಯಕ್ಷತೆ ವಹಿಸಿದ್ದರು.

ಶಾಲಾ ಪ್ರಧಾನ ಗುರು ಡಾ. ಎಸ್.ವಿ. ತಮ್ಮನಗೌಡ್ರ, ಮಹಾಂತೇಶ ಹುಲ್ಲೂರ, ಬಸವರಾಜ ನಾಯ್ಕರ್, ಶೈಲಾ ಭಾತಾಖಾನಿ, ಶ್ಯಾಮ್ ಸರ್ವದೆ, ಪಿ.ಎಸ್. ಮರಿದೇವರಮಠ, ಕೆ.ಎಸ್. ಗಾಣಿಗೇರ, ಆರ್.ಎಂ. ರೋಣದ, ಬಸವ್ವಾ ಲದ್ದಿ, ಎಸ್.ಎಚ್. ಶಿಕ್ಕಲದಾರ, ಶೋಭಾ ಪಾಟೀಲ್ ಹಾಗೂ ವಿದ್ಯಾರ್ಥಿಗಳು ಇದ್ದರು.

## ಗೃಹ ಲಕ್ಷ್ಮಿ ಯೋಜನೆಯ ಅಕ್ಟೋಬರ್, ನವೆಂಬರ್ ತಿಂಗಳಿನ ಮೊತ್ತ ಪಾವತಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹ ಲಕ್ಷ್ಮಿ ಯೋಜನೆಯು ಅತ್ಯಂತ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ರಾಜ್ಯದ ಮಹಿಳೆಯರ ಆರ್ಥಿಕ ಸಬಲೀಕರಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರವು ಮನೆಯ ಕುಟುಂಬದ ಯಜಮಾನಿಗೆ ಪ್ರತಿ ತಿಂಗಳು 2,000 ರೂ.ಗಳನ್ನು ಅರ್ಹ ಫಲಾನುಭವಿಗಳ ಖಾತೆಗೆ ಜಮಾ ಮಾಡುತ್ತಿದೆ.

ಗದಗ ಜಿಲ್ಲೆಯ ಗೃಹ ಲಕ್ಷ್ಮಿ ಯೋಜನೆಯಡಿ ಅಕ್ಟೋಬರ್ ಮತ್ತು ನವೆಂಬರ್ 2024 ರ ಮಾಹೆಯಲ್ಲಿ ಜಿಲ್ಲೆಯಲ್ಲಿ ಒಟ್ಟಾರೆ 248525 ಅರ್ಜಿಗಳು ನೋಂದಣಿ/ ಸ್ವೀಕೃಗೊಂಡಿದ್ದು




ಆ ಪೈಕಿ 244398 ಅರ್ಜಿಗಳು ಮಂಜೂರಾತಿ ಪಡೆದಿವೆ.

ತಾಲೂಕಾವಾರು ವಿವರ : ಗದಗ – 77191, ಗಜೇಂದ್ರಗಡ – 26057, ಲಕ್ಷ್ಮೇಶ್ವರ– 25897, ಮುಂಡರಗಿ– 34007, ನರಗುಂದ– 23162, ರೋಣ– 35625, ಶಿರಹಟ್ಟಿ– 22459 ಅರ್ಜಿಗಳು ಮಂಜೂರಾಗಿವೆ. ಈ ಎಲ್ಲ ಫಲಾನುಭವಿಗಳಿಗೂ ಗೃಹ ಲಕ್ಷ್ಮಿ ಯೋಜನೆಯಡಿ ಅಕ್ಟೋಬರ್, ನವೆಂಬರ್ 2024 ರ ಮೊತ್ತ ಪಾವತಿಸಲಾಗಿದೆ ಎಂದು ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

### ಹುಲಕೋಟಿಯ ಕೆವಿಕೆಯಲ್ಲಿ ನೈಸರ್ಗಿಕ ಕೃಷಿ ಕಾರ್ಯಾಗಾರ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ರೈತರು ನೈಸರ್ಗಿಕ ಕೃಷಿಗೆ ಮುಂದಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿಯಲ್ಲಿರುವ ಹಲವಾರು ಸಮಸ್ಯೆಗಳಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಕೃಷಿಯನ್ನು ಲಾಭದಾಯಕವಾಗಿ ಮಾಡಬೇಕು, ನೈಸರ್ಗಿಕ ಕೃಷಿಯನ್ನು ಮಾಡಲು ರೈತರು ಮುಂದೆ ಬರಬೇಕು. ಇದರಿಂದ ರೈತರ ಆತ್ಮಹತ್ಯೆಯ ಪ್ರಕರಣಗಳು ಕಡಿಮೆ ಆಗಬೇಕು. ಇಲ್ಲಿ ಸೇರಿರುವ ರೈತರೆಲ್ಲರೂ ಸೇರಿ ಸೂಕ್ತವಾದ ನಿರ್ಣಯಗಳನ್ನು ಕೈಗೊಂಡರೆ ಅವುಗಳನ್ನು ಈಡೇರಿಸಲು ರಾಜಕೀಯ ಹಾಗೂ ಕಾನೂನಾತ್ಮಕ ನೀತಿಗಳನ್ನು ಜಾರಿಗೊಳಿಸಲು ನಾವು ಬದ್ಧರಾಗಿದ್ದೇವೆ ಎಂದು ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಾಡು ಕಂಡ ಅಪರೂಪದ ರಾಜಕಾರಣಿ, ಸಹಕಾರಿ ರಂಗದ ಭೀಷ್ಮ ಕೆ.ಎಚ್. ಪಾಟೀಲರ ಜನ್ಮ ಶತಮಾನೋತ್ಸವ (1925-2025) ಸಂಭ್ರಮದ ಅಂಗವಾಗಿ ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ನೈಸರ್ಗಿಕ ಕೃಷಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಅಧ್ಯಕ್ಷತೆ ವಹಿಸಿದ್ದ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಚೇರಮನ್ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಈ ದಿಶೆಯಲ್ಲಿ ನಾವು ಕೆಲಸ ಮಾಡುತ್ತಿದ್ದು, ಇನ್ನೂ ಹೆಚ್ಚು ಕೆಲಸ ಆಗಬೇಕು. ರೈತರು ಕೃಷಿಯಲ್ಲಿ ಖರ್ಚನ್ನು ಕಡಿಮೆ ಮಾಡಲು ನೈಸರ್ಗಿಕ ಕೃಷಿ ಒಂದು ಉತ್ತಮ ಕೊಡುಗೆಯಾಗಿದೆ. ಪ್ರತಿಯೊಬ್ಬರೂ ವಿಷಮುಕ್ತ ಆಹಾರವನ್ನು ದಿನನಿತ್ಯ ಸೇವಿಸುವಂತಾಗಬೇಕು ಎಂದು ತಿಳಿಸಿದರು.

ವೇದಿಕೆ ಮೇಲೆ ಪ್ರಗತಿಪರ ರೈತರಾದ ಸಿದ್ದಪ್ಪ ಕರಿಕಟ್ಟಿ, ಅಕ್ಬರಸಾಬ ಬಬರ್ಚಿ, ಡಾ. ಎಲ್.ಜಿ. ಹಿರೇಗೌಡರ, ಡಾ. ಸುಧಾ ವ್ಹಿ.ಮಂಕಣಿ ಉಪಸ್ಥಿತರಿದ್ದರು.

ರಾಜ್ಯದ 18 ಜಿಲ್ಲೆಗಳಿಂದ ಆಗಮಿಸಿದ್ದ 230 ಜನ ರೈತರು ಈ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

> ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ತುಮಕೂರಿನ ನೈಸರ್ಗಿಕ ಕೃಷಿ ತಜ್ಞರಾದ ಪ್ರಸನ್ನ ಮೂರ್ತಿ ಮಾತನಾಡಿ, ನಮ್ಮ ಹೊಲದ ಮಣ್ಣು ಹೊಲದಿಂದ ಹೊರಗೆ ಹೋಗದಂತೆ ತಡೆಯುವದು, ಬಿದ್ದ ನೀರು ಇಂಗುವಂತೆ ಮಾಡುವುದು ಅತ್ಯಗತ್ಯ. ತಮ್ಮ ಹೊಲದ ಬೀಜವನ್ನು ತಾವೇ ಉಪಯೋಗಿಸಬೇಕು ಎಂದರಲ್ಲದೆ, ಒಂದು ಜವಾರಿ ಆಕಳನ್ನು ಸಾಕಿ ಅದರಿಂದ ಸಿಗುವ ಗಂಜಲು ಮತ್ತು ಸೆಗಣಿ ಉಪಯೋಗಿಸಿ ತಮ್ಮ 6 ಎಕರೆ ಕ್ಷೇತ್ರದಲ್ಲಿ ನೈಸರ್ಗಿಕ ಕೃಷಿಯನ್ನು ಮಾಡುತ್ತಿದ್ದೇವೆ ಎಂದು ತಿಳಿಸಿದರು.

## ಸಂಪಾದಕೀಯ

# ಹಳೆ ಪಿಂಚಣಿ ಯೋಜನೆ ಜಾರಿ ಅಷ್ಟು ಸುಲಭವಲ್ಲ

ರಾಜ್ಯ ಸರ್ಕಾರಿ ನೌಕರರ ಪ್ರಮುಖ ಬೇಡಿಕೆಯಾಗಿರುವ ಹಳೆ ಪಿಂಚಣಿ ಯೋಜನೆ ಜಾರಿ ಕುರಿತಂತೆ ಅಧ್ಯಯನ ಸಮಿತಿ ಸಕಾರಾತ್ಮಕ ಒಲವು ತೋರಿರುವುದು ರಾಜ್ಯದ ಸರ್ಕಾರಿ ನೌಕರರಿಗೆ ಸಂತಸ ತಂದಿದೆ.

ಕೆಲವೇ ದಿನಗಳಲ್ಲಿ ಅಧ್ಯಯನ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸುವುದು ನಿಶ್ಚಿತವಾಗಿದೆ. ಸರ್ಕಾರ ಅಧ್ಯಯನ ವರದಿ ಆಧರಿಸಿ ಹಳೆ ಪಿಂಚಣಿ ಯೋಜನೆ ಜಾರಿಗೊಳಿಸಿದಲ್ಲಿ ರಾಜ್ಯದ ಎರಡುವರೆ ಲಕ್ಷ ಸರ್ಕಾರಿ ನೌಕರರ ಹೋರಾಟಕ್ಕೆ ಬಹುದೊಡ್ಡ ಜಯ ಸಿಕ್ಕಂತಾಗುತ್ತದೆ.

ಆದರೆ ಹಳೆ ಪಿಂಚಣಿ ಯೋಜನೆ ಜಾರಿಗೊಳಿಸುವುದು ಅಷ್ಟು ಸುಲಭದ ಮಾತಲ್ಲ. ಕೇಂದ್ರ ಸರ್ಕಾರ ಕಡ ಖಂಡಿತವಾಗಿ ಹಳೆ ಪಿಂಚಣಿ ಯೋಜನೆ ಬದಲಾಗಿ ಹಳೆ ಪಿಂಚಣಿಯನ್ನ ಜಾರಿಗೊಳಿಸುವುದಿಲ್ಲ ಎಂದು ಹೇಳಿದೆ. ಕೇಂದ್ರ ಸರ್ಕಾರ ಒಪ್ಪದಿದ್ದರೆ ರಾಜ್ಯ ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ಅನ್ವಯಿಸುವುದು ಅಷ್ಟು ಸುಲಭಕ್ಕೆ ಸಾಧ್ಯವಿಲ್ಲ.

ಆದರೆ ಕೆಲ ರಾಜ್ಯಗಳು ಹಳೆ ಪಿಂಚಣಿ ವ್ಯವಸ್ಥೆಯನ್ನ ಜಾರಿಗೊಳಿಸಿವೆ. ಅದಕ್ಕಾಗಿ ರಾಜ್ಯ ಸರ್ಕಾರದಿಂದಲೇ ಅನುದಾನವನ್ನ ಮೀಸಲಿಟ್ಟಿದೆ. ಕರ್ನಾಟಕದಲ್ಲೂ ರಾಜ್ಯ ಸರ್ಕಾರವೇ ಪಿಂಚಣಿವಂತಿಕೆಯನ್ನ ನೀಡಲು ಮುಂದಾದರೆ ಮಾತ್ರ ಹಳೆ ಪಿಂಚಣಿ ವ್ಯವಸ್ಥೆ ಜಾರಿಗೊಳ್ಳಲು ಸಾಧ್ಯ.

ಆದರೆ ಸದ್ಯದ ಪರಿಸ್ಥಿತಿಯಲ್ಲಿ ರಾಜ್ಯ ಸರ್ಕಾರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ. ಗ್ಯಾರಂಟಿ ಯೋಜನೆಗಳಿಗೆ ಸಾಕಷ್ಟು ಅನುದಾನ ಹೊಂದಾಣಿಕೆ ಆಗಬೇಕಾಗಿರುವುದರಿಂದ, ಸದ್ಯಕ್ಕೆ ಹಳೆ ಪಿಂಚಣಿ ಯೋಜನೆಯ ಜಾರಿಗೊಳಿಸುವುದು ಕಷ್ಟ ಸಾಧ್ಯ

## ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷವು ಮಾರ್ಚ್ 12ರಂದು ಆಚರಿಸಲಾಗುವ ಶ್ರೀ ರೇಣುಕಾಚಾರ್ಯ ಜಯಂತಿ ನಿಮಿತ್ತ ಮಾರ್ಚ್ 5 ರ ಬುಧವಾರ ಸಂಜೆ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾವಯವ ಕೃಷಿ ತಜ್ಞೆ ಡಾ. ಕವಿತಾ ಮಿಶ್ರಾ ಅವರಿಗೆ ಶ್ರೀ ರಂಭಾಪುರಿ ಮಹಾಪೀಠದ ಅತ್ಯುನ್ನತ ಗೌರವ

# ಗಂಧದ ಕಂಪಿಗೆ 'ಶ್ರೀ ಜ. ರೇಣುಕಾಚಾರ್ಯ ಪ್ರಶಸ್ತಿ'

ವ್ಯಕ್ತಿ ತನ್ನ ಜೀವನದ ಹಾದಿಯಲ್ಲಿ ಉತ್ತಮ ವಿಚಾರ ಮತ್ತು ಉದಾತ್ತ ಚಿಂತನೆಗಳನ್ನು ಮೈಗೂಡಿಸಿಕೊಂಡರೆ ಎಂತಹ ಸಾಧನೆಯನ್ನು ಬೇಕಾದರೂ ಮಾಡಬಲ್ಲ. ನಿರಂತರ ಕ್ರಿಯಾಶೀಲತೆ, ದೂರದೃಷ್ಟಿ, ಮನದ ಸಂಕಲ್ಪ, ನಿಶ್ಚಿತ ದಾರಿ, ಪ್ರಯೋಗಾತ್ಮಕ ಒಲವು-ನಿಲುವುಗಳನ್ನು ಹೊಂದಿದ್ದರೆ ಸಾಧಕರ ಸರದಿಯಲ್ಲಿ ನಿಲ್ಲಬಲ್ಲ. ಸೂಚ್ಯ ಕಾರ್ಯ ಯೋಜನೆಗಳ ಮುಖಾಂತರ ಬೆಳೆದು ಬೆಳಗಬಲ್ಲ. ಇಂತಹ ಅಪರೂಪದ ಗುಣ ಮೌಲ್ಯಗಳನ್ನು ಹೊಂದಿದವರು ವಿರಳ. ವಿರಳರಲ್ಲಿಯೇ ಸರಳರಾಗಿದ್ದುಕೊಂಡು ಸದ್ದಿಲ್ಲದೆಯೇ ಸಾಧನೆಯ ಹಾದಿ ಹಿಡಿದುವಿಶ್ವಮಟ್ಟದಲ್ಲಿ ಹೆಸರು ಮಾಡಿರುವ ರಾಯಚೂರು ಜಿಲ್ಲೆಯ ಸಿರಿವಾರ ತಾಲೂಕಿನ ಕವಿತಾಳದ ಡಾ. ಕವಿತಾ ಮಿಶ್ರಾ ಅವರು ನಮ್ಮ ಮಣ್ಣಿನ ಹೆಮ್ಮೆಯ ಮಗಳು.

ಮಹಿಳೆ ಅಬಲೆಯಲ್ಲ, ಸಬಲೆ ಎಂಬುದಕ್ಕೆ ಅಕ್ಷರಶಃ ಪ್ರತಿರೂಪದಂತಿರುವ ಕವಿತಾ ಮಿಶ್ರಾರವರು ಕೃಷಿ ಕ್ಷೇತ್ರದಲ್ಲಿ ಸತತವಾಗಿ ಮಾಡಿಕೊಂಡು ಬಂದಿರುವ ಕಾರ್ಯ ಯೋಜನೆಗಳೇ ಅವರ ಸಾಧನೆಯನ್ನು ತಿಳಿಸುತ್ತವೆ. ಧಾರವಾಡದ ಅಗ್ನಿಹೋತ್ರಿ ಮನೆತನದ ಹೆಸರಾಂತ ಉದ್ಯಮಿಗಳಾದ ಪ್ರಕಾಶ ಮತ್ತು ಗಂಗೂಬಾಯಿ ಅವರ ಸುಪುತ್ರಿಯಾಗಿ 16-02-1977ರಂದು ಜನಿಸಿದ ಇವರು ಬಾಲ್ಯದಲ್ಲಿಯೇ ಮಾತಾ-ಪಿತರಿಂದ ಉತ್ತಮ ಸಂಸ್ಕಾರ ಪಡೆದು ಬೆಳೆದವರು. ಕವಿತಾ ಮಿಶ್ರಾರವರು ಧಾರವಾಡದ ಪ್ರೆಸೆಂಟೇಷನ್ ಶಾಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವನ್ನು ಪೂರೈಸಿದರು. ಮುಂದೆ ಕಿಟೆಲ್ ಕಾಲೇಜಿನಲ್ಲಿ ಪಿಯು ವಿಜ್ಞಾನ ವಿಭಾಗವನ್ನು ಆಯ್ಕೆ ಮಾಡಿಕೊಂಡು ಅತ್ಯುತ್ತಮ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದವರು.

ಆಧುನಿಕ ತಂತ್ರಜ್ಞಾನ ಶಿಕ್ಷಣದಲ್ಲಿ ವಿಶೇಷ ಆಸಕ್ತಿ ಹೊಂದಿದ್ದ ಇವರು 1996ರಲ್ಲಿ ಗಣಕಯಂತ್ರ ವಿಷಯದ ಮೇಲೆ ಹುಬ್ಬಳ್ಳಿಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂಜಿನಿಯರಿಂಗ್ ಪದವಿ ಪಡೆದರು. ಅಲ್ಲದೇ ಮನೋವಿಜ್ಞಾನ ವಿಷಯದ ಮೇಲೆ ಕವಿವಿಯಿಂದ ಎಂ.ಎ.ಪದವಿಯನ್ನೂ ಸಹ ತಮ್ಮದಾಗಿಸಿಕೊಂಡವರು. ಇದೇ ಸಂದರ್ಭದಲ್ಲಿ ಇವರಿಗೆ ರಾಯಚೂರು ಜಿಲ್ಲೆಯ ಕವಿತಾಳದ ಆರೋಗ್ಯ ಇಲಾಖೆಯ ಅಧಿಕಾರಿಗಳಾಗಿದ್ದ ಉಮಾಶಂಕರ ಮಿಶ್ರಾ ಅವರೊಂದಿಗೆ ವಿವಾಹ ನಿಶ್ಚಯವಾಯಿತು.

ಕಲಿಕಾಸಕ್ತಿ, ಸಂಶೋಧನೆಗಳ ಮೇಲೆ ಪ್ರೌಢಿಮೆ ಹೊಂದಿದವರಾಗಿ ಕೆಲವು ವರ್ಷಗಳ ಕಾಲ ವಿವಿಧೆಡೆಗಳಲ್ಲಿ ತಾಂತ್ರಿಕ ವೃತ್ತಿಯನ್ನು ಆಯ್ಕೆ ಮಾಡಿಕೊಂಡು ಕಾರ್ಯ ನಿರ್ವಹಿಸಿ ಅಲ್ಲಿಯೂ ಯಶಸ್ವಿಯಾದರು. ಆಧುನಿಕ ವೃತ್ತಿಯ ಪರಿಸರ ಅಷ್ಟೇನೂ ಒಗ್ಗದ ಕಾರಣ ಕವಿತಾ ಮಿಶ್ರಾ ಅವರು ಖಾಸಗಿ ಐಟಿ ಕಂಪನಿಗಳ ವ್ಯಾಪ್ತಿಯಿಂದ ಹೊರ ಬಂದು ಭೂತಾಯಿಯ ಸೇವೆ ಮಾಡುವ ಸಂಕಲ್ಪ ಮಾಡಿ ಕಾರ್ಯಾರಂಭ ಮಾಡಿದರು.

ಮನೆತನದ ಪರಿಸ್ಥಿತಿಯನ್ನರಿತು ಪತಿಯ ಪ್ರೇರಣೆಯಿಂದ ತಮ್ಮ 8 ಎಕರೆ ಬಂಜರು ಭೂಮಿಯಲ್ಲಿ ಉಳುಮೆ ಆರಂಭಿಸಿದರು. ಮೌಸ್-ಕೀಬೋರ್ಡ್ ಬಳಸಿ ಕಾರ್ಯ ನಿರ್ವಹಿಸಿದ್ದ ಇವರು ಕುಂಟೆ-ರಂಟೆಗಳ ಜೊತೆಗೂಡಿ ಜಮೀನು ಹಸನು ಮಾಡುವ ಸಂದರ್ಭದಲ್ಲಿ ಬಹಳವೇ ಕಷ್ಟಪಟ್ಟರು. ಬಂಜರು ಭೂಮಿಗೆ ಹೊಸ ಆಯಾಮವನ್ನು ತಂದಿಟ್ಟರು. ಆರಂಭದಲ್ಲಿ ದಾಳಿಂಬೆ ಸಸಿಗಳನ್ನು ನೆಟ್ಟರು. ಭೂಮಿಯ ಪರಿಸರ ಮತ್ತು ನೀರಿನ ಕೊರತೆಯಿಂದಾಗಿ ದಾಳಿಂಬೆ ಬೆಳೆ ಉತ್ತಮವಾಗಿ



ಬೆಳೆದಿದ್ದರೂ ಸಹ ಅಕಾಲಿಕ ರೋಗದಿಂದ ಬೆಳೆ ಸಂಪೂರ್ಣವಾಗಿ ನಾಶ ಹೊಂದುವಂತಾಯಿತು. ಏನೇ ಆದರೂ ಪಟ್ಟು ಬಿಡದ ಮಿಶ್ರಾ ಅವರು ಮತ್ತೆ ಕಾರ್ಯಾರಂಭ ಮಾಡಿ ಕೊಳವೆ ಬಾವಿ ಕೊರೆಯಿಸಿ, ನೀರಾವರಿ ಮೂಲಕ ದಾಳಿಂಬೆ ಫಸಲನ್ನು ಅತ್ಯುತ್ತಮವಾಗಿ ಪಡೆದರು. ಇದೇ ಸಂದರ್ಭದಲ್ಲಿ ಕೃಷಿ ಭೂಮಿಗೆ ನವ್ಯ ಮಾದರಿಯ ತಾಂತ್ರಿಕ ಚಿಕಿತ್ಸೆಯಿಂದ ಫಲವತ್ತತೆಯನ್ನು ಹೆಚ್ಚಿಸಿದರು.

2008ರಲ್ಲಿ ಸಾಂಪ್ರದಾಯಿಕ ಬೆಳೆಗಳ ಜೊತೆಗೆ ಶ್ರೀಗಂಧದ ಬಗ್ಗೆ ವಿವಿಧ ಭಾಗಗಳಲ್ಲಿ ನಡೆದ ವಿಚಾರ ಸಂಕಿರಣಗಳಲ್ಲಿ ಭಾಗವಹಿಸಿ ಹೆಚ್ಚಿನ ವಿಷಯ ಪಡೆದು, ಸರಳವಾಗಿ ಮತ್ತು ಕೀಟನಾಶಕ ಮುಕ್ತವಾಗಿ ಶ್ರೀಗಂಧದ ಸಸಿಗಳನ್ನು ನೆಟ್ಟು ಹೆಮ್ಮರವಾಗಿ ಬೆಳೆಯುವಂತೆ ಮಾಡಿದರು. ಬೆಳೆದು ನಿಂತ ಮರಗಳಿಗೆ ಮೈಕ್ರೋಚಿಪ್‌ಗಳನ್ನು ಅಳವಡಿಸಿದ್ದಲ್ಲದೇ ಸಿಸಿ ಕ್ಯಾಮರಾ ಕಣ್ಗಾವಲಿನೊಂದಿಗೆ ಕೃಷಿಗೆ ತಾಂತ್ರಿಕ ಸ್ಪರ್ಶ ನೀಡಿದರು. 8 ವಿಭಿನ್ನ ಜಾತಿಯ ನಾಯಿಗಳಿಗೆ ತರಬೇತಿ ನೀಡಿ ಕಾವಲು ಪಡೆಯನ್ನು ಗಟ್ಟಿಗೊಳಿಸಿದ ಗಟ್ಟಿಗಿತ್ತಿ ಕವಿತಾ ಅವರು ಶ್ರೀಗಂಧದ ಫಸಲನ್ನು ಹೆಚ್ಚುವರಿಯಾಗಿ ಪಡೆದುಕೊಂಡರು.

ಸಧ್ಯ 2100 ಶ್ರೀಗಂಧ, 1500 ದಾಳಿಂಬೆ, 90 ಮಾವು, 300 ನಿಂಬೆ, 800 ಪೇರಲ, 150 ನೆಲ್ಲಿಕಾಯಿ, 100 ತೆಂಗು, 100 ಸೀತಾಫಲ, 150 ನುಗ್ಗೆ, 150 ಕರಿಬೇವು, 100 ಮಲ್ಲಿಗೆ ಸೇರಿದಂತೆ ಹಲವು ವಿಶಿಷ್ಠ ಜಾತಿಯ ಸಸಿಗಳನ್ನು, ಗಿಡಗಳನ್ನು, ಮರಗಳನ್ನು ಜಮೀನಿನಲ್ಲಿ ಹೊಂದಿದ್ದಾರೆ. ಇವುಗಳಿಂದ ಸಮೃದ್ಧ ಫಲವನ್ನು ಪಡೆಯುತ್ತಿದ್ದಾರೆ. ಅಲ್ಲದೇ ಸಿಹಿನಿಂಬೆ, ಸಪೋಟ, ಬಾಳೆ, ಕಾಫಿ, ಮೆಣಸು, ಅರಿಷಿಣದಂತಹ ಬೆಳೆಗಳನ್ನು ಬೆಳೆದು ಬಹುತೇಕ ಜಮೀನಿನ ತುಂಬೆಲ್ಲ ಹಸಿರು ರಾರಾಜಿಸುವಂತೆ ಮಾಡಿದ್ದಾರೆ.

ದಿನದ ಅಷ್ಟೂ ವೇಳೆಯನ್ನು ವ್ಯವಸಾಯಕ್ಕೆ ಮೀಸಲಿಟ್ಟಿರುವ ಕವಿತಾ ಮಿಶ್ರಾ ಅವರು ಕೃಷಿ ಕಾರ್ಯಕ್ಕೆ ಪರ್ಯಾಯವಾಗಿ ಜೇನುಹುಳು, ಎರೆಹುಳು, ಕುರಿ ಸಾಕಾಣಿಕೆ, ದೇಶಿಹಸುಗಳ ಸಾಕಾಣಿಕೆ, ಗೀರ್ ಹಸುಗಳ ಪೋಷಣೆಯೊಂದಿಗೆ ಮೀನುಗಾರಿಕೆಯಲ್ಲೂ ಮೇಲುಗೈ ಸಾಧಿಸಿದವರು. ಬೆಂಗಳೂರಿನ ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜಂಟ್ ಲಿಮಿಟೆಡ್ (ಏಖಆಐ)ನೊಂದಿಗೆ ಒಪ್ಪಂದ ಮಾಡಿಕೊಂಡು ಶ್ರೀಗಂಧ ಹಾಗೂ ಕೆಂಪು ಶ್ರೀಗಂಧದ ಮರಗಳನ್ನು ಪೂರೈಸುವವರಾಗಿದ್ದಾರೆ. ಇಂದಿಗೂ ಸಬಲ-ಸಮೃದ್ಧ ಸಾವಯವ ಕೃಷಿಯಲ್ಲಿ ತೊಡಗಿಸಿಕೊಂಡು ಸಾಂಪ್ರದಾಯಿಕ ಬೇಸಾಯಕ್ಕೆ ಆಧುನಿಕತೆಯ ತಾಂತ್ರಿಕ ಸ್ಪರ್ಶ ನೀಡಿ ಹೆಮ್ಮರವಾಗಿ ಬೆಳೆದಿರುವ ಕೃಷಿ ಮಾತೆ ಕವಿತಾ ಮಿಶ್ರಾ.

ಆಧುನಿಕ ಯುಗದ ಭರದಲ್ಲಿಯೂ ಸಾಂಪ್ರದಾಯಿಕ ಕೃಷಿಯ ಮೂಲಕ ತೋಟಗಾರಿಕೆ, ಅರಣ್ಯ ಮತ್ತು ಪಶು ಸಂಗೋಪನೆಯನ್ನು ಒಗ್ಗೂಡಿಸಿಕೊಂಡು ಸಮಗ್ರಯುತ ಕೃಷಿಗೆ ತಮ್ಮನ್ನು ತಾವು ಅರ್ಪಿಸಿಕೊಂಡು ಗಣನೀಯ ಪ್ರಮಾಣದ ಕೊಡುಗೆಯಿತ್ತು ಮುನ್ನಡೆಯುತ್ತಿರುವ ಇವರ ಯಶೋಗಾಥೆಗೆ ಸಾಕ್ಷಿ ಎಂಬಂತೆ ಅನೇಕ ಸಂಘ-ಸಂಸ್ಥೆಗಳು, ಮಠ-ಮಾನ್ಯಗಳು, ವಿಶ್ವವಿದ್ಯಾಲಯಗಳು, ದೇಶಮಟ್ಟದ ವಿವಿಧ ಸಂಘಟನೆಗಳು, ಸರ್ಕಾರ ಮಟ್ಟದ ಹಲವಾರು ಪದವಿ-ಪ್ರಶಸ್ತಿ-ಪುರಸ್ಕಾರಗಳು ಅರಸಿ ಬಂದು ಇವರ ಒಡಲು ತುಂಬಿವೆ. ಇತ್ತೀಚಿಗೆ ವಿಜಯನಗರ ಜಿಲ್ಲೆಯ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯವು ಇವರು ಮಾಡಿದ ಕೃಷಿ ಸಾಧನೆಗೆ ಗೌರವ ಡಾಕ್ಟರೇಟ್ ಪದವಿಯನ್ನಿತ್ತು ಮತ್ತಷ್ಟು ಕಾರ್ಯೋತ್ಸಾಹವನ್ನು ಹೆಚ್ಚಿಸಿದೆ.

ಹಸಿರನ್ನು ಉಸಿರಾಗಿಸಿಕೊಂಡು ಮುನ್ನಡೆಯುವಲ್ಲಿ ಸದಾ ಸಕ್ರಿಯರಾದ ಡಾ. ಕವಿತಾ ಮಿಶ್ರಾ ಅವರಿಗೆ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದಲ್ಲಿ ಮಾರ್ಚ್ 12ರಂದು ಶ್ರೀಮದ್ರಂಭಾಪುರಿ ವೀರಸಿಂಹಾಸನಾಧೀಶ್ವರ ಶ್ರೀ ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ದಿವ್ಯ ಸಾನ್ನಿಧ್ಯದಲ್ಲಿ ಪಾಲ್ಗೊಳ್ಳುವ ನಾಡಿನ ವಿವಿಧ ಶ್ರೀಗಳವರ ಹಾಗೂ ಗಣ್ಯ ಮಾನ್ಯರ ಸಮ್ಮುಖದಲ್ಲಿ ಜರುಗುವ ಯುಗಾವತಾರಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ಮತ್ತು ಶಿವಾದ್ವೈತ ಸಮಾವೇಶದ ಸುಸಂದರ್ಭದಲ್ಲಿ 1 ಲಕ್ಷ ರೂ. ನಗದು ಬಹುಮಾನ, ಕಂಚಿನ ಫಲಕ ಹಾಗೂ ಸ್ಮರಣಿಕೆಯನ್ನು ಒಳಗೊಂಡಿರುವ 2025ನೇ ಸಾಲಿನ ಶ್ರೀಪೀಠದ ಅತ್ಯುನ್ನತ 'ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ'ಯನ್ನು ಅನುಗ್ರಹಿಸಲಾಗುವುದು.

**- ಡಾ. ಗುರುಪಾದಯ್ಯ ವೀ. ಸಾಲಿಮಠ. ಸವಣೂರು.**

### ನಾಲ್ವಾಡಗಲ್ಲಿಯ ಕಾಮರತಿ ಉತ್ಸವಕ್ಕೆ ಶತಮಾನೋತ್ಸವದ ಸಂಭ್ರಮ

# ಹಿರಿಯರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಾಲ್ವಾಡಗಲ್ಲಿಯ ಕಾಮರತಿ ಉತ್ಸವಕ್ಕೆ ಇದೀಗ ಶತಮಾನೋತ್ಸವದ ಸಂಭ್ರಮವಿದ್ದು, ತನ್ನಿಮಿತ್ತ ಮಾರ್ಚ್ 14ರಿಂದ 18ರವರೆಗೆ ವೈವಿಧ್ಯಮಯ ಕಾರ್ಯಗಳನ್ನು ಹಮ್ಮಿಕೊಳ್ಳಲು ಉತ್ಸವ ಸಮಿತಿ ನಿರ್ಧರಿಸಿದೆ.

ಅಂಗನವಾಡಿ ಶಾಲೆಯ ಪ್ರಾಂಗಣದಲ್ಲಿ ಜರುಗಿದ ನಾಲ್ವಾಡ ಓಣಿಯ ಗುರು-ಹಿರಿಯರ, ಯುವಕರ ಉಪಸ್ಥಿತಿಯಲ್ಲಿ ಉತ್ಸವ ಸಮಿತಿಯ ಸಭೆಯಲ್ಲಿ ಈ ನಿರ್ಧಾರವನ್ನು ಕೈಗೊಳ್ಳಲಾಯಿತು.

ಮಾ. 14ರಂದು ಶುಕ್ರವಾರ ಸಂಜೆ 6.30 ಗಂಟೆಗೆ ಉತ್ಸವದ ಸಭಾ ಮಂಟಪದಲ್ಲಿ ಶತಮಾನೋತ್ಸವದ ಸಂಭ್ರಮಕ್ಕಾಗಿ 1 ಸಾವಿರ ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ ರೂಪಿಸಲಾಗಿದೆ.

ಮಾ. 18ರಂದು ಮುಂಜಾನೆ 10.30 ಗಂಟೆಗೆ ಧಾರವಾಡದ ಹೆಸರಾಂತ ಜಗ್ಗಲಗಿಯ ಮೇಳದೊಂದಿಗೆ ಬೃಹತ್ ಮೆರವಣಿಗೆ ಜರುಗಲಿದೆ.

ಸಭೆಯಲ್ಲಿ ಉಪಸ್ಥಿತರಿದ್ದ ನಾಲ್ವಾಡಗಲ್ಲಿಯ ಹಿರಿಯರಾದ ಶಿವಯ್ಯ ಭದ್ರಕಾಳಮ್ಮನಮಠ, ವೀರಪ್ಪ



ಲಕ್ಕುಂಡಿ, ಚನ್ನವೀರಪ್ಪ ಟೆಂಗಿನಕಾಯಿ, ವ್ಹಿ.ಕೆ. ಮಟ್ಟಿ, ಶಿವಪ್ಪ ಪಟ್ಟಣಶೆಟ್ಟಿ, ಅಂದಪ್ಪ ಜಿನಗಾ, ಶ್ರೀಶೈಲಪ್ಪ ಅಣ್ಣಿಗೇರಿ, ಚಂಬಣ್ಣ ಚನ್ನವೀರಶೆಟ್ಟರ, ವಿಶ್ವನಾಥ ಟೆಂಗಿನಕಾಯಿ, ಸಿದ್ದಪ್ಪ ಹರ್ತಿ, ಬಸಣ್ಣ ಹರ್ತಿ, ಬಸಣ್ಣ ಗೌಡ್ರ, ವಿರೂಪಾಕ್ಷಪ್ಪ ಅಣ್ಣಿಗೇರಿ ನಾಲ್ವಾಡಗಲ್ಲಿಯಲ್ಲಿ ಕಾಮರತಿ ಉತ್ಸವ ಆಚರಿಸಿಕೊಂಡು ಬಂದ ಪರಂಪರೆಯನ್ನು ವಿವರಿಸಿ ಯುವಕರು ಒಗ್ಗಟ್ಟಿನೊಂದಿಗೆ, ಶಾಂತಿ-ಸಮಾಧಾನದಿಂದ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕೆಂದು ಸಲಹೆ ನೀಡಿದರು.

ವಿರುಪಾಕ್ಷಪ್ಪ ಅಣ್ಣಿಗೇರಿ, ಅಪ್ಪುರಾಜ ಭದ್ರಕಾಳಮ್ಮನಮಠ, ಶಿವಯೋಗಿ ಟೆಂಗಿನಕಾಯಿ, ಬಸವರಾಜ ಜಿನಗಾ, ಪ್ರಕಾಶ ಬೇಂದ್ರೆ, ಮಂಜುನಾಥ ಲಕ್ಕುಂಡಿ, ಬಸವರಾಜ ಅಣ್ಣಿಗೇರಿ, ರಾಜಣ್ಣ ಹುಳ್ಳಿಗೌಡ್ರ, ಅಮಿತ್ ಲಕ್ಕುಂಡಿ, ಶಶಿ ಹಾಗೂ ರವಿ ಅಣ್ಣಿಗೇರಿ, ನವೀನ ಲಕ್ಕುಂಡಿ, ಸಲೀಂ ಪಠಾಣ, ಕಾರ್ತಿಕ ಲಕ್ಕುಂಡಿ, ಕಾರ್ತಿಕ ಪರ್ವತಗೌಡ್ರ, ಪುರದಪ್ಪ ಅಣ್ಣಿಗೇರ, ಮಂಜುನಾಥ ನಾಲ್ವಾಡ, ಶಿವು ಅಣ್ಣಿಗೇರಿ, ಮಹೇಶ ಜಿನಗಾ, ಸೋಮು ಅಣ್ಣಿಗೇರಿ, ಈರಣ್ಣ ಚವಡಿ, ನಾಗು ಅಣ್ಣಿಗೇರಿ ಮುಂತಾದವರು ಯುವಕರೆಲ್ಲರೂ ಸೇರಿ ಒಗ್ಗಟ್ಟಿನಿಂದ ಕೆಲಸ ಕಾರ್ಯಗಳನ್ನು ಹಂಚಿಕೊಂಡು ಶಿಸ್ತಿನಿಂದ ಕೆಲಸ ಮಾಡಬೇಕೆಂದು ಹಿರಿಯರು ಮಾರ್ಗದರ್ಶನ ಮಾಡಿದರು.

ಮಾ. 15ರಂದು ಸಂಜೆ 6.30ಕ್ಕೆ ಮಹಿಳೆಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಮಾ. 16ರಂದು ಸಂಜೆ 6.30 ಗಂಟೆಗೆ 100 ವರ್ಷಗಳ ಕಾಲ ನಿರಂತರವಾಗಿ ಕಾಮರತಿ ಉತ್ಸವವನ್ನು ಯಶಸ್ವಿಯಾಗಿ ನಡೆಸಿಕೊಂಡ ಬಂದಿರುವ ಸಮಿತಿಯ ಹಿರಿಯರಿಗೆ ಸನ್ಮಾನಿಸಿ ಕಾರ್ಯಕ್ರಮ ಜರುಗಲಿದೆ.

# ಸ್ಮರಣ ಸಂಚಿಕೆಗೆ ಲೇಖನ-ಕವನಗಳ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕುರ್ತಕೋಟಿ ಗ್ರಾಮದಲ್ಲಿ ಏಪ್ರಿಲ್ ತಿಂಗಳಿನಲ್ಲಿ ನಡೆಯಲಿರುವ ಗದಗ ತಾಲೂಕಾ 5ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸ್ಮರಣ ಸಂಚಿಕೆಗೆ ಲೇಖನಗಳನ್ನು ಆಹ್ವಾನಿಸಲಾಗಿದೆ.

ಲೇಖಕರು ಗದಗ ತಾಲೂಕಿನ ಪ್ರಾಮುಖ್ಯತೆ, ಐತಿಹಾಸಿಕ, ಸಾಂಸ್ಕೃತಿಕ, ಶೈಕ್ಷಣಿಕ, ಧಾರ್ಮಿಕ ಕ್ಷೇತ್ರ ಸೇರಿದಂತೆ ಕುರ್ತಕೋಟಿ ಗ್ರಾಮ ಐತಿಹಾಸಿಕ, ಸಾಮಾಜಿಕ, ಸಹಕಾರಿ ಕ್ಷೇತ್ರದಲ್ಲಿನ ಅಭಿವೃದ್ಧಿ ಹೀಗೆ ವಿವಿಧ ರೀತಿಯ ಕೊಡುಗೆಗಳು, ಕನ್ನಡ ನುಡಿ, ಸಂಸ್ಕೃತಿಗೆ ಸಂಬಂಧಿಸಿದ ಲೇಖನಗಳನ್ನು ಮತ್ತು ಕವಿತೆಗಳನ್ನು ನುಡಿ ತಂತ್ರಾಂಶದಲ್ಲಿ ಟೈಪ್ ಮಾಡಿ ರಿತಭಜತುಟಿಚಿಟಚಿಡಿಚಿಜ27@ ರಟಚಿಟ.ಛಿಂಟ ಈ ಮಿಂಚಂಚೆ (ಮೇಲ್) ವಿಳಾಸಕ್ಕೆ ಕಳುಹಿಸಿಕೊಡಬೇಕು.

ಬರಹಗಳ ಜೊತೆ ಲೇಖಕರ ಭಾವಚಿತ್ರ, ಸಂಪರ್ಕ ಸಂಖ್ಯೆ ಸ್ಪಷ್ಟವಾಗಿ ನಮೂದಿಸಬೇಕು. ಬರಹಗಳನ್ನು ಸ್ವೀಕರಿಸಲು ಮಾರ್ಚ್ 15 ಕೊನೆಯ ದಿನ. ಬರಹಗಳ ಆಯ್ಕೆಯಲ್ಲಿ ಸಂಪಾದಕ ಮಂಡಳಿಯ ತೀರ್ಮಾನವೇ ಅಂತಿಮ. ಈ ಕುರಿತು ಯಾವುದೇ ಪತ್ರ ಅಥವಾ ದೂರವಾಣಿ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ ಎಂದು ಸಾಹಿತ್ಯ ಪರಿಷತ್ ಗದಗ ತಾಲೂಕು ಘಟಕದ ಅಧ್ಯಕ್ಷರಾದ ಡಾ. ರಶ್ಮಿ ಅಂಗಡಿ ತಿಳಿಸಿದ್ದಾರೆ.

ಕವನ

## ವಾಸ್ತವಿಕ ಕನ್ನಡ



ಕನ್ನಡ ಎಂಬ ಮೂರಕ್ಷರಗಳಲ್ಲಿರುವ ಆ ಗತ್ತು,
ಅದನ್ನು ವರ್ಣಿಸಲು ಸಿಗುತ್ತಿಲ್ಲ ಪದಗಳ ಹತ್ತು,
ರಾರಾಜಿಸುತ್ತಿವೆ ಕನ್ನಡದ ಬಾವುಟಗಳು ಎತ್ತಲು,
ಒಂದೇ ದಿನಕ್ಕೆ ಸೀಮಿತವಾಯಿತಲ್ಲ ನಮ್ಮ
ಈ ಕನ್ನಡಾಭಿಮಾನದ ಪ್ರೀತಿಯ ತೊಟ್ಟಿಲು.

ಆಂಗ್ಲ ಭಾಷೆಯಲ್ಲಿ ಸಿಕ್ಕಿ ನಲಗುತ್ತಿದೆ ನನ್ನ ಈ ಕನ್ನಡ,
ಯಾರು ಕೇಳದಾದರೂ ನನ್ನ ಈ ಕನ್ನಡದ 49 ಅಕ್ಷರಗಳ ಕಷ್ಟವ,
ಎಲ್ಲರೂ ಮುಳುಗಿರುವರು 26 ಅಕ್ಷರದ ಲೋಕದಲ್ಲಿ,
ಅದೇ ಲೋಕ ನನ್ನ ಕನ್ನಡವನ್ನು ದೂಡುತ್ತಿದೆ ಕತ್ತಲಲ್ಲಿ.

ಹುಡುಕಬೇಕಾಗಿದೆ ಕನ್ನಡ ಕಲಿಸುವ ಶಾಲೆಗಳನ್ನು,
ಹುಡುಕಿದರೂ ಸಿಗುತ್ತಿಲ್ಲ ಕನ್ನಡ ಕಲಿಯುವವರನ್ನು,
ಮುಚ್ಚಿ ಹೋಗುತ್ತಿವೆ ನನ್ನ ಕನ್ನಡದ ಶಾಲೆಯ ಬಾಗಿಲುಗಳು,
ಬಾಗಿಲು ತೆಗೆದಿವೆ ಭಾವನೆ ಇಲ್ಲದ ಭಾಷೆಯ ಶಾಲೆಗಳು.

ಎಲ್ಲ ಜನಪ್ರತಿನಿಧಿಗಳು ಮುಳುಗಿರುವರು
ಗ್ಯಾರೆಂಟಿ ಯೋಜನೆ ನೀಡುವಲ್ಲಿ,
ಅವರನ್ನಾರಿಸಿ ತಂದವರು ಮಲಗಿರುವರು ಬಾರಿನಲ್ಲಿ,
ಇವರ ನಡುವೆ ಕನ್ನಡಕ್ಕಾಗಿ ಹೋರಾಡುತ್ತಿರುವರು ಬೆರಳಣಿಕೆಯಲ್ಲಿ,
ಇನ್ನೂ ಮುಗಿಯುತ್ತಿಲ್ಲ ಗ್ಯಾರಂಟಿ ಯೋಜನೆಯ ಗುಂಗಿಲ್ಲಿ.

ಪಠ್ಯ ಪುಸ್ತಕಗಳಿಂದ ಕಲಿಯಬೇಕಾಗಿದೆ ಕನ್ನಡ ಕಟ್ಟುವುದೇಗೆಂದು,
ಮುಂದೊಂದು ದಿನ ಓದಬೇಕಾಗುತ್ತದೆನೋ ಕನ್ನಡವಿತ್ತೆಂದು,
ಸಾಕು ನಿಲ್ಲಿಸಿ ಪರಭಾಷೆಯ ಮೋಹವಿಂದು,
ಎಲ್ಲರೂ ಹೇಳಿ ಕನ್ನಡ ನಮ್ಮದೆಂದು,
ಅದು ಕಾಯುವುದು ನಮ್ಮನ್ನು ಎಂದೆಂದು,ಎಂದೆಂದು..
ಆಗ ಸಿಗುವುದು ನಿಮ್ಮ ಜನ್ಮಕ್ಕೆ ಮುಕ್ತಿಯೊಂದು.



**- ಸತ್ಯ ಕವಿ.**

### ಗದಗ-ಬೆಟಗೇರಿಯಲ್ಲಿ ಸೇವಾಭಾರತಿ ಟ್ರಸ್ಟ್‌ನ ರಜತ ಸಂಭ್ರಮಾಚರಣೆ

# ಉಚಿತ ಆರೋಗ್ಯ ತಪಾಸಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಸೇವೆಯ ಮುಖ್ಯ ಉದ್ದೇಶವಿಟ್ಟುಕೊಂಡು ಕಳೆದ 25 ವರ್ಷಗಳಿಂದ ತನ್ನನ್ನು ಸಮರ್ಪಿಸಿಕೊಂಡಿರುವ ಹುಬ್ಬಳ್ಳಿಯ ಸೇವಾಭಾರತಿ ಟ್ರಸ್ಟ್ ರಜತ ಸಂಭ್ರಮ ಆಚರಣೆಯ ನಿಮಿತ್ತ ಗದುಗಿನಲ್ಲಿ ರವಿವಾರ ವಿವಿಧೆಡೆ ಉಚಿತ ಆರೋಗ್ಯ ತಪಾಸಣೆ ಉಚಿತ ಔಷಧ ವಿತರಣೆಯ ಶಿಬಿರವನ್ನು ಏರ್ಪಡಿಸಿತ್ತು.

ಗದುಗಿನ ವೀರರಾಣಿ ಕಿತ್ತೂರ ರಾಣಿ ಚನ್ನಮ್ಮಳ ಮುತ್ಥಳಿ ಎದುರಿಗೆ ಹಿಂದುಳಿದ ಪ್ರದೇಶ, ಗದಗ ರಾಜೀವ ಗಾಂಧಿ ನಗರದಲ್ಲಿ ಹಾಗೂ ಬೆಟಗೇರಿಯ ಬಿ.ಬಿ. ಬಣ್ಣದ ನಗರದಲ್ಲಿ ರವಿವಾರ ಏಕಕಾಲದಲ್ಲಿ ಮುಂಜಾನೆಯಿಂದ ಮಧ್ಯಾಹ್ನದವರೆಗೆ ತಜ್ಞ ವೈದ್ಯರ ತಂಡ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳ ಮೂರು ತಂಡಗಳು ಕಾರ್ಯಾಚರಣೆ ನಡೆಸಿದವು.

ರಾಜೀವ ಗಾಂಧಿ ನಗರದ ಗದಗ ಜಿಲ್ಲಾ ಗೊಂಧಳಿ ಸಮಾಜ ಸಭಾ ಭವನದಲ್ಲಿ ಡಾ. ಉಮೇಶ ಹಾದಿ, ಡಾ. ಅಂಕುಶ ಕೆ.ಎಸ್, ಡಾ. ವಿಶ್ವನಾಥ ದಂಡಿನ, ಡಾ. ಸಂಕೇತ, ಡಾ.ಸೃಜನ್ ಅವರ ನೇತೃತ್ವದಲ್ಲಿ ವೈದ್ಯಕೀಯ ವಿದ್ಯಾರ್ಥಿಗಳಾದ ಸಹನಾ ಬಾವಿಕಟ್ಟಿ, ಶ್ರೀಲಕ್ಷ್ಮೀ ಕುಲಕರ್ಣಿ, ಸಹನಾ ಹಿರೇಮಠ, ಎ.ಎಸ್. ಮಾನಸಾ, ಅಂಕಿತಾ ಕಣನ್, ಶಿವನಗೌಡ್ರ ಈ ಭಾಗದ ಜನರ ಆರೋಗ್ಯವನ್ನು




ತಪಾಸಣೆ ನಡೆಸಿದರು.

ಶಿಬಿರದ ಯಶಸ್ವಿಗೆ ನಗರ ಸಂಘ ಚಾಲಕರಾದ ಬಸವರಾಜ ನಾಗಲಾಪೂರ, ಸೇವಾಭಾರತಿ ಪ್ರಕಲ್ಪದ ಶಶಿಕುಮಾರ ಕುರ್ತಕೋಟಿ, ಯಲ್ಲಪ್ಪ ಕುಂಬಾರ, ರಾಕೇಶ್, ಶಶಿಕುಮಾರ, ರಾಜಕುಮಾರ ಮುಂತಾದವರು ಶ್ರಮಿಸಿದರು.

ನಗರ ಸೇವಾ ಪ್ರಮುಖ ಬಸವರಾಜ ಪಟ್ಟಣಶೆಟ್ಟಿ, ಅಮೂಲ್ಯ ದತ್ತು ಸ್ವೀಕಾರ ಸಂಸ್ಥೆಯ ಕಾರ್ಯದರ್ಶಿ ರಾಜೇಶ ಖಟವಟೆ, ಅರುಣೋದಯ ಶಾಲಾ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ, ಕಾರ್ಯದರ್ಶಿ ಜಯರಾಜ ಮುಳಗುಂದ, ಮಂಜು ಕಾಟವಾ, ಕೀರ್ತಿ ಕಾಂಬಳೇಕರ, ಆಕಾಶ ಗುಜ್ಜರ, ರಾಘವೇಂದ್ರ ಕಾಟವಾ ಶಿಬಿರದ ಯಶಸ್ವಿಗೆ ಶ್ರಮಿಸಿದರು.

ಬೆಟಗೇರಿಯ ಬಿ.ಬಿ. ಬಣ್ಣದ ನಗರದ ಸರಕಾರಿ ಕ.ಗಂ.ಮ.ಶಾ. ನಂ. 11ರಲ್ಲಿ ಏರ್ಪಡಿಸಿದ್ದ ಶಿಬಿರದಲ್ಲಿ ಡಾ. ಪ್ರಕಾಶ ಹೊಸಮನಿ, ಡಾ. ರಾಜು, ಡಾ. ಸತ್ಯ ಡಿ, ಡಾ. ಶ್ರೀಹರಿ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಾದ ನಿತ್ಯಾ ಭಟ್, ಶ್ವೇತಾ, ಸಂಗಮೇಶ್ವರಿ, ಸುಚಿತ್ರಾ, ಮನಿಶಾ, ರಕ್ಷಿತಾ ಆರೋಗ್ಯ ತಪಾಸಣೆ ನಡೆಸಿದರು.

ನಗರದ ಸಹ ಸಂಘ ಚಾಲಕ ನರಸಿಂಹ ಕಾಮಾರ್ತಿ, ಅಮೂಲ್ಯ ದತ್ತು ಸ್ವೀಕಾರ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ, ಮಾಜಿ ಅಧ್ಯಕ್ಷ ಮಂಜುನಾಥ ಚನ್ನಪ್ಪನವರ, ನಗರಸಭಾ ಸದಸ್ಯ ಮಾಧುಸಾ ಮೇರವಾಡೆ, ಲಲಿತಾಬಾಯಿ ಮೇರವಾಡೆ, ವಿರುಪಾಕ್ಷಪ್ಪ ಐಲಿ, ಪ್ರಮೋದ ಹಿರೇಮಠ ಶಿಬಿರದ ಯಶಸ್ವಿಗೆ ಶ್ರಮಿಸಿದರು ಎಂದು ನರಸಿಂಹ ಕಾಮಾರ್ತಿ ತಿಳಿಸಿದ್ದಾರೆ.

ಗದಗ ಮುಳಗುಂದ ನಾಕಾ ಬಳಿ ಇರುವ ವೀರರಾಣಿ ಕಿತ್ತೂರ ಚನ್ನಮ್ಮ ಸರ್ಕಲ್ ಬಳಿ ಇರುವ ಹಿಂದುಳಿದ ಪ್ರದೇಶದ ಯಲ್ಲಮ್ಮದೇವಿ ದೇವಸ್ಥಾನದ ಆವರಣದಲ್ಲಿ ಏರ್ಪಡಿಸಿದ್ದ ಶಿಬಿರದಲ್ಲಿ ಡಾ. ವಿನಯಕುಮಾರ ತೆರದಾಳ, ಡಾ. ಪ್ರಜ್ವಲ ಡಾ. ಯೋಗಿತ, ಡಾ. ರಾಘವೇಂದ್ರ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಾದ ಶ್ರೀವತ್ಸ, ಸ್ಫೂರ್ತಿ ಎಚ್, ಗುತ್ತೆಮ್ಮ, ಪ್ರತಿಭಾ, ಸ್ಫೂರ್ತಿರಾಮ್, ಪ್ರೇಮಾ ಜನರ ಆರೋಗ್ಯವನ್ನು ತಪಾಸಣೆ ನಡೆಸಿದರು.

## ಗವಿಸಿದ್ದಪ್ಪಗೆ ತಾಲೂಕ ಶ್ರೇಷ್ಠ ಕೃಷಿಕ ಪ್ರಶಸ್ತಿ




■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮದ ಪ್ರಗತಿಪರ ರೈತ ಗವಿಸಿದ್ದಪ್ಪ ಸಂಜೀವಣ್ಣವರ್ ಅವರಿಗೆ ಮುಂಡರಗಿ ತಾಲೂಕ ಶ್ರೇಷ್ಠ ಕೃಷಿಕ ಪ್ರಶಸ್ತಿ ಲಭಿಸಿದೆ.

ಗವಿಸಿದ್ದಪ್ಪ ಸಂಜೀವಣ್ಣವರ ಡಂಬಳ ಗ್ರಾಮದಲ್ಲಿ ಹಲವು ಸಾವಯವ ಮಾದರಿಯ ಮತ್ತು ವೈಜ್ಞಾನಿಕ ರೀತಿಯಲ್ಲಿ ಬೆಳೆಗಳನ್ನು ಮತ್ತು ತೋಟಗಾರಿಕಾ ಡ್ರ್ಯಾಗನ್, ಬಾಳೆ, ಲೀಚಿ, ಅಡಕೆ ಸೇರಿದಂತೆ ಹಲವು ದೇಶಿಯ, ವಿದೇಶಿಯ ತಳಿಯ ಬೆಳೆಗಳನ್ನು ಬೆಳೆಯುತ್ತಿದ್ದಾರೆ. ಕೃಷಿ ಶ್ರೇಷ್ಠ ಪ್ರಶಸ್ತಿ ಪಡೆದ ಗವಿಸಿದ್ಧಪ್ಪ ಸಂಜೀವಣ್ಣವರ ಅವರಿಗೆ ಗ್ರಾಮದ ರೈತರು, ಹಿರಿಯರು, ಯುವ ರೈತರು ಅಭಿನಂದಿಸಿದ್ದಾರೆ.

## ಶ್ರೀ ಗಾಳೆಮ್ಮದೇವಿಯ ಜಾತ್ರಾ ಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೇಹೊಸೂರ ಗ್ರಾಮದಲ್ಲಿ ಮಾ.3ರಿಂದ 5ರವರೆಗೆ ಶ್ರೀ ಗಾಳೆಮ್ಮದೇವಿ 3ನೇ ಜಾತ್ರಾ ಮಹೋತ್ಸವ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನಮಠ ಮತ್ತು ಬಾಲೆಹೊಸೂರಿನ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ಹಾಗೂ ಮಹಾಸ್ವಾಮಿಗಳು ಸಂಸ್ಥಾನಮಠ ಕೆರಹು ಹಾಗೂ ಬಾಲೇಹೊಸೂರ ಚಿತ್ರದುರ್ಗದ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವ ಮೂರ್ತಿ ಮಾದಾರ ಚನ್ನಯ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಫೆ.4ರಂದು ಗಣಹೋಮ, ದುರ್ಗಾ ಹೋಮ, ಪ್ರಾಣ ಪ್ರತಿಷ್ಠಾಪನೆ, ಮಂಗಳಾರಾತಿ, ಮಹಾಪ್ರಸಾದ, ಸಂಜೆ 6ಕ್ಕೆ ಶ್ರೀ ದೇವಿಯ ಉತ್ಸವ ಊರಿನ ಪ್ರಮುಖ ಬೀದಿಗಳಲ್ಲಿ ಜರುಗುವುದು. ಫೆ.5ರಂದು ಶ್ರೀದೇವಿಗೆ ಉಡಿ ತುಂಬುವುದು, ಮಹಾಪೂಜೆ ಹಾಗೂ ಮಂಗಳಾರತಿ, ರಾತ್ರಿ 6 ಗಂಟೆಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರದೊಂದಿಗೆ ವಿವಿಧ ಕಲಾವಿದರಿಂದ ಜಾನಪದ ಜಾತ್ರೆ ಜರುಗುವುದು ಎಂದು ಪ್ರಕಟಣೆ ತಿಳಿಸಿದೆ.

ಎಸ್.ಎಸ್. ಗುಜಮಾಗಡಿಯವರ ಸೇವಾ ನಿವೃತ್ತಿಯ ಬೀಳ್ಕೊಡುಗೆ ಸಮಾರಂಭದಲ್ಲಿ ವೀರನಗೌಡ ಪಾಟೀಲ

# ಅನುದಾನಿತ ಕನ್ನಡ ಶಾಲೆಗಳು ಅಳಿವಿನಂಚಿನಲ್ಲಿವೆ

■ವಿಜಯಸಾಕ್ಷಿ ಸುದ್ದಿ, ಗದಗ

ಒಂದು ಕಾಲದಲ್ಲಿ ಉತ್ತರ ಕರ್ನಾಟಕದಲ್ಲಿ ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳು ಶಿಕ್ಷಣ ಪ್ರಸಾರದಲ್ಲಿ ಪೈಪೋಟಿಯೊಂದಿಗೆ ಈ ಭಾಗದಲ್ಲಿ ಶಿಕ್ಷಣ ಹರಡುವಂತೆ ಮಾಡಿ, ದೇಶದ ಅಭಿವೃದ್ಧಿಗೆ ಜನರು ಪ್ರಜ್ಞಾವಂತರಾಗಿ ಕೈಜೋಡಿಸುವಂತಹ ಕೆಲಸ ಮಾಡಿವೆ. ಇಂತಹ ಶಿಕ್ಷಣ ಸಂಸ್ಥೆಗಳು ಇಂದು ಖಾಸಗೀಕರಣಗೊಂಡು ಆಂಗ್ಲ ಭಾಷಾ ಭರಾಟೆಯಲ್ಲಿ ಅನುದಾನಿತ ಶಾಲೆಗಳಿಗೆ ನಿವೃತ್ತ ಶಿಕ್ಷಕರ ಜಾಗದಲ್ಲಿ ಹುದ್ದೆ ತುಂಬಲು ಇಲಾಖೆ ಅನುಮತಿ ನೀಡದ್ದರಿಂದ ಇಂದು ಅನುದಾನಿತ ಕನ್ನಡ ಶಾಲೆಗಳು ಅಳಿವಿನ ಅಂಚಿನಲ್ಲಿವೆ ಎಂದು ವಿದ್ಯಾವರ್ಧಕ ಸಂಸ್ಥೆಯ ಗೌರವ ಕಾರ್ಯದರ್ಶಿ ವೀರನಗೌಡ ಪಾಟೀಲ ನುಡಿದರು.

ಅವರು ಸಿ.ಎಸ್. ಪಾಟೀಲ ಹಿರಿಯ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ನಡೆದ ಸಹ ಶಿಕ್ಷಕ ಎಸ್.ಎಸ್. ಗುಜಮಾಗಡಿಯವರ ಸೇವಾ ನಿವೃತ್ತಿಯ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಇಂತಹ ಶಾಲೆಗಳು ಮತ್ತೆ ಎದ್ದು ನಿಲ್ಲುವಂತಾಗಬೇಕಾದರೆ ನಿವೃತ್ತ ಶಿಕ್ಷಕರು, ಇಲ್ಲಿ ಕಲಿತು ಹೋದ ವಿದ್ಯಾರ್ಥಿಗಳು ತಮ್ಮ ಶಾಲೆಯ ಹಳೆಯ ವೈಭೋಗ ನೋಡಲು ಇಚ್ಛಿಸಬೇಕು. ಅದಕ್ಕೆ ಕೈ ಜೋಡಿಸಬೇಕು ಎಂದರು.

ನಿವೃತ್ತಿ ಹೊಂದಿದ ಎಸ್.ಎಸ್. ಗುಜಮಾಗಡಿ, ಪ್ರಾಥಮಿಕ ಶಾಲಾ ಮುಖ್ಯಾಧ್ಯಾಪಕ ಡಾ. ಆರ್.ಎಲ್. ಹಂಸನೂರ, ಗದಗ ಜಿಲ್ಲಾ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ರವಿ ಕೋಟಿ, ಆಂಜನೇಯ ಕಟಗಿ ಸಂದರ್ಭೋಚಿತವಾಗಿ ಮಾತನಾಡಿದರು.

ನಿರ್ಮಲಾ ಲಮಾಣಿ ಪ್ರಾರ್ಥಿಸಿದರು. ಎಸ್. ಆರ್. ಗೌಡರ ಸ್ವಾಗತಿಸಿದರು. ಎಸ್.ಎಂ. ತಳವಾರ ವಂದಿಸಿದರು.

ಆಡಳಿತ ಮಂಡಳಿಯ ಸದಸ್ಯರಾದ ಡಾ. ಎಮ್.ಎಸ್. ಮಲ್ಲಾಪೂರ, ಗೀತಾಬಾಯಿ ಪಾಟೀಲ, ಎಸ್.ಜಿ. ಕೋಲ್ಮಿ, ಎಮ್.ಆರ್. ನಾಯಕ, ನಗರಸಭಾ ಅಭಿಯಂತರ ಎಚ್.ಎ. ಬಂಡಿವಡ್ಡರ, ವಿದ್ಯಾಧರ ದೊಡ್ಡಮನಿ, ಎಂ. ಇಸ್ಮಾಯಿಲ್, ಯಮನೂರಪ್ಪ ಗುಜಮಾಗಡಿ, ಎಸ್.ಎಸ್. ಗುಜಮಾಗಡಿ, ಶೋಭಾ ಗುಜಮಾಗಡಿ, ಎನ್.ಎಮ್. ಪಾಟೀಲ, ಎಂ.ಬಿ. ಹೋಳಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಇಲಾಖೆಯ ಅಧಿಕಾರಿಗಳಾದ ಕವಿತಾ ಬೇಲೇರಿ, ತನು ಹೂಗಾರ, ಶಾಲೆಯ ನಿವೃತ್ತ ಶಿಕ್ಷಕರಾದ ಬಿ.ಜಿ. ಮೆಣಸಗಿ, ಎಸ್. ಎಸ್. ಗಂಜಿ, ಆರ್.ಕೆ. ಜಮಖಂಡಿ, ಜಿ.ಆಯ್. ಚನ್ನಪ್ಪನವರ, ಗುಜಮಾಗಡಿ ಶಿಕ್ಷಕರ ಅಭಿಮಾನಿಗಳು, ಬಂಧುಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಗದಗ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟೆಪ್ಪನವರ ಮಾತನಾಡುತ್ತಾ, ವಿಶಾಲವಾದ ಮೈದಾನ ಸುಸಜ್ಜಿತ ಕಟ್ಟಡ ಹೊಂದಿದ ನಗರದ ಮಧ್ಯವರ್ತಿ ಸ್ಥಳದಲ್ಲಿರುವ ಇಂತಹ ಸಂಸ್ಥೆಗಳು ಉಳಿದು-ಬೆಳೆಯಲು ಅಧಿಕಾರಿಗಳಾದ ನಾವು ಕಾನೂನು ಚೌಕಟ್ಟಿನಲ್ಲಿ ಸಹಕರಿಸುತ್ತೇವೆ ಎಂದರು.

## ವೃದ್ಧಾಶ್ರಮದಲ್ಲಿ ಶಿಕ್ಷಕರ ಜನ್ಮದಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಂಜಿಎಂ ಯುನಿವರ್ಸಲ್ ಶಾಲೆಯ 7ನೇ ತರಗತಿ ವಿದ್ಯಾರ್ಥಿಗಳು ಚಿತ್ರನಟ ದಿ. ಪುನೀತರಾಜ್ ಕುಮಾರ ಅವರ ರಾಜಕುಮಾರ ಚಿತ್ರದಿಂದ ಪ್ರೇರಿತರಾಗಿ ಶಾಲೆಯ ಶಿಕ್ಷಕ ಮಂಜುನಾಥ ಜಾಡರ ಅವರ ಜನ್ಮದಿನವನ್ನು ಪಟ್ಟಣದ ವೃದ್ಧಾಶ್ರಮದಲ್ಲಿ ಹಿರಿಯ ನಾಗರಿಕರೊಂದಿಗೆ ಅರ್ಥಪೂರ್ಣವಾಗಿ ಆಚರಿಸಿ ಮಾನವೀಯತೆ ಮೆರೆದರು.

ಪಾಶ್ಚಾತ್ಯ ಸಂಸ್ಕೃತಿಯ ಕೇಕ್ ವಿತರಿಸುವ ಬದಲಾಗಿ ವೃದ್ಧಾಶ್ರಮದ ಹಿರಿಯರಿಗೆ ಹಣ್ಣು, ಉಪಹಾರ ವಿತರಿಸಿದರು. ಶಿಕ್ಷಕ ಮಂಜುನಾಥ ಜಾಡರ ವಿದ್ಯಾರ್ಥಿಗಳ ಈ ಸಾಮಾಜಿಕ, ಮಾನವೀಯತೆಯ ಹೊಣೆಗಾರಿಕೆಯನ್ನು ಶ್ಲಾಘಿಸಿ, ಮಕ್ಕಳಲ್ಲಿನ ಇಂತಹ ಸ್ನೇಹ ಸಂಪನ್ನ ಹೃದಯಗಳು ಭವಿಷ್ಯದ ಶ್ರೇಷ್ಠ ನಾಗರಿಕರನ್ನು ರೂಪಿಸುತ್ತವೆ ಎಂದರು. ಶಾಲೆಯ 7ನೇ ತರಗತಿ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಕ್ರೀಡೆಗಳಿಂದ ದೇಹ, ಮನಸ್ಸು ಸದೃಢ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕ್ರೀಡೆಗಳಿಂದ ದೇಹ ಮತ್ತು ಮನಸ್ಸು ಸದೃಢವಾಗಿರುತ್ತದೆ. ಸದೃಢವಾದ ದೇಹದಲ್ಲಿ ಸದೃಢವಾದ ಮನಸ್ಸು ಇರುತ್ತದೆ ಎಂದು ಎಸ್‌ಎವಿವಿಪಿ ಸಮಿತಿಯ ಆಡಳಿತಾಧಿಕಾರಿ ಎನ್.ಆರ್. ಗೌಡರ ಹೇಳಿದರು.

ಅವರು ಪಟ್ಟಣದ ಬಸವೇಶ್ವರ ಸಿಬಿಎಸ್‌ಇ ಶಾಲಾ ಆವರಣದಲ್ಲಿ ನಡೆದ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಯುವ ಜನರಲ್ಲಿ ಕ್ರೀಡೆಗಳ ಮನೋಭಾವನೆ ಕುಂಠಿತವಾಗುತ್ತಿದೆ. ಇಂತಹ ಕ್ರೀಡಾಕೂಟಗಳನ್ನು ಆಯೋಜನೆ ಮಾಡುವುದರಿಂದ ಯುವ ಜನತೆಯಲ್ಲಿ ಕ್ರೀಡಾಸಕ್ತಿ ಬೆಳೆಯುತ್ತದೆ. ಯುವ ಜನತೆ ಮೊಬೈಲ್‌ನಿಂದ ದೂರವಿದ್ದು ಆದಷ್ಟು ಸಮಯವನ್ನು ಕ್ರೀಡೆಗಳ ಕಡೆ ವ್ಯಯಿಸಬೇಕು ಎಂದರು.



ಅಧ್ಯಕ್ಷತೆ ವಹಿಸಿದ್ದ ಶಾಲಾ ಚೇರಮನ್ ರವೀಂದ್ರನಾಥ ದೊಡ್ಡಮೇಟಿ ಮಾತನಾಡಿ, ಆಧುನಿಕತೆಯ ಅಬ್ಬರದಲ್ಲಿ ಕಳೆದು ಹೋಗುತ್ತಿರುವ ಗ್ರಾಮೀಣ ಕ್ರೀಡೆಗಳ ಉಳಿವಿಗೆ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕಿದೆ. ವಿದ್ಯಾರ್ಥಿಗಳು ಬರೀ ಓದಿಗೆ ಮಹತ್ವ ನೀಡದೇ ಕ್ರೀಡೆಗಳಲ್ಲಿ ಪಾಲ್ಗೊಳ್ಳುವಲ್ಲಿಯೂ ಗಮನ ಹರಿಸಬೇಕಿದೆ ಎಂದರು.

ಮುಖ್ಯ ಅತಿಥಿ ಪ್ರಾಚಾರ್ಯ ಬಿ.ಎಚ್. ಬಂಡಿಹಾಳ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಮಾನಸಿಕ, ದೈಹಿಕವಾಗಿ ಹಾಗೂ ಉತ್ತಮ ಆರೋಗ್ಯ ಪಡೆಯಲು ಕ್ರೀಡೆಗಳು ಜೀವನದಲ್ಲಿ ಬಹಳ ಅವಶ್ಯಕ ಎಂದರು.

ಕೆ.ವಿ.ಬಿ.ಎಂ ಉಚಿತ ಪ್ರಸಾದ ನಿಲಯುದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಗಿ, ಶಾಲಾ ಆಡಳಿತ ಮಂಡಳಿ ಸದಸ್ಯರುಗಳಾದ ಡಾ. ಜಿ.ಕೆ. ಕಾಳೆ, ಸದಾಶಿವ ಕರಡಿ, ವಿ.ಬಿ. ಸೋಮನಕಟ್ಟಿಮಠ, ದೈಹಿಕ ಶಿಕ್ಷಕ ಜೆ.ಎಚ್. ಹಾಲಕೆರೆ ಸೇರಿದಂತೆ ಎಲ್ಲಾ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿ ವರ್ಗ ಭಾಗವಹಿಸಿದ್ದರು. ಶಿಕ್ಷಕ ಕುಮಾರ ಹರ್ಲಾಪೂರ ಸ್ವಾಗತಿಸಿದರು. ಶಿಕ್ಷಕಿಯರಾದ ಅನುರಾಧ ಕರಡಿ ನಿರೂಪಿಸಿದರು. ಗೀತಾ ಬಡಿಗೇರ ವಂದಿಸಿದರು.

# ರೋಟರಿ ಕಣ್ಣಿನ ಆಸ್ಪತ್ರೆಗೆ ದೇಣಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಡಿಯಲ್ಲಿ ನಡೆಯುವ ರೋಟರಿ ಉಚಿತ ಕಣ್ಣಿನ ಆಸ್ಪತ್ರೆಗೆ ಇಂದುಮತಿ ಬ್ಯಾಲಹುಣಸಿಯವರು ಒಂದು ಲಕ್ಷ ರೂಪಾಯಿ ದೇಣಿಗೆ ನೀಡಿದರು.

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಹಾಗೂ ರೋಟರಿ ಕ್ಲಬ್ ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 200ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಕೊಪ್ಪಳದ ನಿವೃತ್ತ ಶಿಕ್ಷಕಿ ಇಂದುಮತಿ ಬ್ಯಾಲಹುಣಸಿಯವರು ಸಂಸ್ಥೆಯ ಕಾರ್ಯಕ್ರಮವನ್ನು ಮೆಚ್ಚಿ ಸಂಸ್ಥೆಗೆ ಅವರ ತಾಯಿ ದಿ. ಶ್ರೀಮತಿ ನೀಲಮ್ಮ ನಾಗಪ್ಪ ಬ್ಯಾಲಹುಣಸಿ ಹಾಗೂ ತಂದೆ ದಿ. ನಾಗಪ್ಪ ನಿಂಗಪ್ಪ ಬ್ಯಾಲಹುಣಸಿ ಇವರ ಸ್ಮರಣಾರ್ಥ ಸಂಸ್ಥೆಯು ನಡೆಸುವ ನಿರಂತರ ನೇತ್ರ ಚಿಕಿತ್ಸಾ ಶಿಬಿರಕ್ಕೆ ಸಹಾಯವಾಗುವಂತೆ ಒಂದು ಲಕ್ಷ ರೂಪಾಯಿಗಳನ್ನು ನೀಡಿದರು.




ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಪೂಜ್ಯ ಮನ್ನಿರಂಜನ ಜಗದ್ಗುರು ಶ್ರೀ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಇಂದುಮತಿ ಬ್ಯಾಲಹುಣಸಿಯವರು ರೋಟರಿ ಸಂಸ್ಥೆಗೆ ನೀಡಿದ ದಾನವು ಶ್ಲಾಘನೀಯವಾಗಿದ್ದು, ಅವರ ಈ ಕಾರ್ಯ ಪ್ರಸಂಶನೀಯವೆಂದು ಆಶೀರ್ವದಿಸಿದರು.

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷರಾದ ಶ್ರೀಧರ ಸುಲ್ತಾನಪೂರ, ನೀಲಮ್ಮ ಪ್ರಭಣ್ಣ ಹುಣಶಿಕಟ್ಟಿ, ಪ್ರಭಣ್ಣ ಹುಣಶಿಕಟ್ಟಿ, ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಆರ್.ಬಿ. ಉಪ್ಪಿನ, ಕಾರ್ಯದರ್ಶಿ ರೊ. ಸಂತೋಷ ಅಕ್ಕಿ, ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಎಸ್.ಹೊಸಳ್ಳಿಮಠ ರೊ. ಡಾ. ಶೇಖರ ಡಿ.ಸಜ್ಜನರ, ಖಜಾಂಚಿ ರೊ. ಚನ್ನವೀರಪ್ಪ ಹುಣಶಿಕಟ್ಟಿ, ಡಾ. ಮಂಜುನಾಥ ಬ್ಯಾಲಹುಣಸಿ ಮುಂತಾದವರು ಉಪಸ್ಥಿತರಿದ್ದರು. ಸಂಸ್ಥೆಯ ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ ವಂದಿಸಿರು.

## ಸಹಕಾರ ಸಂಘದ ಅಧ್ಯಕ್ಷರ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಾ.2ರಂದು ಜರುಗಿದ ಶಿರಹಟ್ಟಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2025ರ ಚುನಾವಣೆಯಲ್ಲಿ ಸಾಲಗಾರರ ಪರಿಶಿಷ್ಟ ಜಾತಿ ಮತಕ್ಷೇತ್ರದಿಂದ ದಯಾನಂದ ದೇವಪ್ಪ ಲಮಾಣಿ ಆಯ್ಕೆಯಾಗಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ತಾ.ಪಂ ಮಾಜಿ ಸದಸ್ಯ ದೇವಪ್ಪ ಲಮಾಣಿ, ಪರಿಶಿಷ್ಟ ಜಾತಿ ಮತಕ್ಷೇತ್ರದಿಂದ ನಮ್ಮ ಭಾಗದಿಂದ ದಯಾನಂದ ಲಮಾಣಿ ಆಯ್ಕೆಯಾಗಿದ್ದು, ಕೃಷಿ ಪತ್ತಿನ ಸಹಕಾರ ಸಂಘದಿಂದ ರೈತರಿಗೆ ಉಪಯುಕ್ತವಾದಂತಹ ಮಾಹಿತಿಗಳನ್ನು ನೀಡುವುದರ ಜೊತೆಗೆ ಸರಕಾರದ ಸೌಲಭ್ಯವನ್ನು ಮುಟ್ಟಿಸುವ ಕೆಲಸ ಮಾಡಲಾಗುವುದು ಎಂದರು.

ಎನ್.ಕೆ. ಲಮಾಣಿ, ಪರಮೇಶ ಪರಬ, ಅಜ್ಜು ಪಾಟೀಲ, ಅಪ್ಪಣ್ಣ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

## ಜಮುನಾರಿಗೆ 'ಕರ್ನಾಟಕ ಪ್ರೈಡ್ ಬಿಸಿನೆಸ್' ಅವಾರ್ಡ್



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಯಶಸ್ವಿ ಉದ್ಯಮಿ ದಿ. ರತನ್ ಟಾಟಾ ಅವರ ಸ್ಮರಣಾರ್ಥವಾಗಿ ರಾಜ್ ನ್ಯೂಸ್ ಕನ್ನಡ ಹಾಗೂ ರಾಜ್ ಮ್ಯೂಸಿಕ್ ಕನ್ನಡ ಸಹಭಾಗಿತ್ವದಲ್ಲಿ ಕರ್ನಾಟಕ ಪ್ರೈಡ್ ಬಿಸಿನೆಸ್ ಅವಾರ್ಡ್ - 2024ಅನ್ನು ನೀಡಲಾಯಿತು.

ಬೆಳಗಾವಿ ಜಿಲ್ಲೆಯ ರಾಮದುರ್ಗ ಪಟ್ಟಣ ಉದ್ಯಮಿ ಪ್ರದೀಪ್ ಕುಮಾರ್ ಪಟ್ಟಣ ಅವರ ಧರ್ಮಪತ್ನಿ ಜಮುನಾ ಪಿ.ಪಟ್ಟಣ ಅವರಿಗೆ ಕರ್ನಾಟಕ ಪ್ರೈಡ್ ಬಿಸಿನೆಸ್ ಅವಾರ್ಡ್-2024ನ್ನು ವಿಧಾನಸಭೆಯ ಅಧ್ಯಕ್ಷರಾದ ಯು.ಟಿ. ಖಾದರ್ ಅವರು ನೀಡಿ ಗೌರವಿಸಿದರು.

ವಿಧಾನಸಭೆ ಮುಖ್ಯ ಸಚೇತಕರಾದ ಅಶೋಕ್ ಮಹದೇವಪ್ಪ ಪಟ್ಟಣ, ವಾಹಿನಿಯ ಪದಾಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬಸವೇಶ್ವರ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಆಚರಿಸಲಾಯಿತು.

ಈ ವೇಳೆ ಮುಖ್ಯ ಶಿಕ್ಷಕಿ ಬಿ.ಜಿ. ಶಿರಸಿ ಮಾತನಾಡಿ, ವಿಜ್ಞಾನದ ಬೆಳವಣಿಗೆಯಿಂದ ತಂತ್ರಜ್ಞಾನದ ಮೂಲಕ ದೇಶದ ಭವಿಷ್ಯ ಉಜ್ವಲವಾಗುತ್ತದೆ. ಯಾವುದೇ ವಿಚಾರಗಳ ಸತ್ಯತೆಯನ್ನು ವಿಜ್ಞಾನವು ತಿಳಿಸಿಕೊಡುತ್ತದೆ. ಇದರಿಂದ ಮೂಢನಂಬಿಕೆಗಳು ನಾಶವಾಗುತ್ತವೆ ಮತ್ತು ಜೀವನ ಸಾರ್ಥಕತೆಯನ್ನು ಪಡೆದುಕೊಳ್ಳುತ್ತದೆ. ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವ ಮೂಲಕ ಉನ್ನತ ಶಿಕ್ಷಣ ಪಡೆದುಕೊಳ್ಳಬೇಕು ಎಂದರು.



ನರೇಗಲ್ಲ ಕ್ಲಸ್ಟರ್ ಸಮೂಹ ಸಂಪನ್ಮೂಲ ವ್ಯಕ್ತಿ ಜ್ಯೋತಿ ಬೇಲೇರಿ ಮಾತನಾಡಿ, ಸರ್ ಸಿ.ವಿ. ರಾಮನ್ ವಿಜ್ಞಾನ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಅವರು ಸಂಶೋಧಿಸಿದ ರಾಮನ್ ಎಫೆಕ್ಟ್ ವಿಶ್ವಕ್ಕೆ ಅದ್ಭುತ ಕೊಡುಗೆಯಾಗಿದೆ. ಲೇಸರ್ ಆವಿಷ್ಕಾರ ಮತ್ತು ಕಂಪ್ಯೂಟರ್ ತಂತ್ರಜ್ಞಾನ ಬೆಳೆದಂತೆ ರಾಮನ್ ಎಫೆಕ್ಟ್ ಉಪಯೋಗ ಹೆಚ್ಚಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಶಿಕ್ಷಕ/ಕಿಯರಾದ ಕೆ.ಐ. ಕೋಳಿವಾಡ, ಎಂ.ವಿ. ಕಡೆತೋಟದ, ಐ.ಬಿ. ಒಂಟೇಲಿ, ಪೂರ್ಣಿಮಾ ಅಂಗಡಿ, ವಿ.ಪಿ. ಗ್ರಾಮಪುರೋಹಿತ, ಎಸ್.ವಿ. ಹಿರೇಮಠ, ವಿ.ಎಸ್. ಜಾಧವ, ಎಸ್.ಕೆ. ಕುಲಕರ್ಣಿ, ಸಾವಿತ್ರಿ ಮಾನ್ವಿ, ಎಂ.ಎಂ. ಸಿಳ್ಳಿನ, ಗೀತಾ ಶಿಂಧೆ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ಅಕ್ಕಮಹಾದೇವಿ ಅಯ್ಯನಗೌಡ್ರ, ರಾಜೇಶ್ವರಿ ಈಟಿ, ಗೀತಾ ಕಂಬಳಿ, ರಜಿಯಾಬೇಗಂ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ವೀಣಾ ಯಾಳಗಿ, ಪದ್ಮಾವತಿ ಅಂಬಿಗೇರ, ಶ್ವೇತಾ ಹಿರೇಮಠ, ನೇತ್ರಾ ಸೋಬಾನದ, ನಂದಿತಾ ರಾಜೂರ, ಎಮ್. ಧರ್ಮಾಯತ್ ಸೇರಿದಂತೆ ಎಲ್ಲ ಸಿಬ್ಬಂದಿಗಳು, ಮಕ್ಕಳು ಉಪಸ್ಥಿತರಿದ್ದರು.

**ಮಾಧ್ಯಮ ಪ್ರತಿನಿಧಿಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ಡಾ. ಎಸ್. ಎಸ್.ನೀಲಗುಂದ**

# ಹೀಟ್ ಸ್ಟ್ರೋಕ್ ಬಗ್ಗೆ ಮುಂಜಾಗ್ರತೆಯಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸಕ್ತ ವರ್ಷ ಬೇಸಿಗೆ ಆರಂಭವಾಗಿದ್ದು, ಸೂರ್ಯನ ತಾಪಮಾನ ಎಂದಿಗಿಂತಲೂ ಹೆಚ್ಚು ಇರಲಿದೆ ಎಂದು ಅಂದಾಜಿಸಲಾಗಿದೆ. ಅಲ್ಲದೇ, ಬಿಸಿಗಾಳಿ ಹಾಗೂ ನಿರಂತರವಾಗಿ ನಿಸರ್ಗದಲ್ಲಿ ಬದಲಾಗುವ ವಾತಾವರಣದಿಂದ ಮಾನವನ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದ್ದು, ಸಾರ್ವಜನಿಕರು ಆರೋಗ್ಯ ಇಲಾಖೆಯ ಸೂಚನೆಗಳನ್ನು ಪಾಲಿಸಬೇಕಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಸೋಮವಾರ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.



> ಜನಸಾಮಾನ್ಯರಿಗೆ ಆರೋಗ್ಯ ಇಲಾಖೆಯ ಹಲವಾರು ಯೋಜನೆಗಳ ಅರಿವು ಕಡಿಮೆಯಿದ್ದು, ಮಾಧ್ಯಮಗಳ ಮೂಲಕ ಜನಸಾಮಾನ್ಯರಿಗೆ ಆರೋಗ್ಯ ಇಲಾಖೆಯ ಕಾರ್ಯಕ್ರಮಗಳನ್ನು ಬಹುಬೇಗನೆ ತಲುಪಿಸುವ ಉದ್ದೇಶದಿಂದಲೇ ಮಾಧ್ಯಮದವರಿಗೆ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಆರೋಗ್ಯ ಇಲಾಖೆಯ ಅತೀ ಪ್ರಮುಖ ಅಂಶಗಳನ್ನು ಜನಸಾಮಾನ್ಯರಿಗೆ ತಲುಪಿಸಲು ಮಾಧ್ಯಮದವರು ಸಹಕಾರ ನೀಡಬೇಕು.
>
> **– ಡಾ. ಎಸ್.ಎಸ್. ನೀಲಗುಂದ.**
> **ಜಿಲ್ಲಾ ಆರೋಗ್ಯ-ಕುಟುಂಬ ಕಲ್ಯಾಣಾಧಿಕಾರಿ.**

ಚಳಿಗಾಲದಲ್ಲಿ ಉಸಿರಾಟದ ತೊಂದರೆ ಜಾಸ್ತಿಯಿರುತ್ತದೆ. ಆದರೆ, ಬೇಸಿಗೆಯಲ್ಲಿ ಹೀಟ್ ವೇವ್, ಹೀಟ್ ಸ್ಟ್ರೋಕ್ ಹೆಚ್ಚಾಗಿ ಕಂಡು ಬರುತ್ತದೆ. ನಮ್ಮ ದೇಹದಲ್ಲಿರುವ ಉಷ್ಣಾಂಶಕ್ಕಿಂತ ತಾಪಮಾನ ಏರಿಕೆ ಉಂಟಾದಾಗ ಹೆಚ್ಚು ಬೆವರುವುದು, ಸುಸ್ತು, ಬಾಯಾರುವುದು, ತಲೆ ಸುತ್ತುವುದು ಕಣ್ಣು ಮಂಜಾಗುವುದರ ಜೊತೆಗೆ ನಿರ್ಜಲೀಕರಣದಿಂದ ಮೂರ್ಛೆ ಬಂದು ಬೀಳಬಹುದು. ಆದ್ದರಿಂದ ಪ್ರತಿಯೊಬ್ಬರೂ ಪ್ರಖರ ಬಿಸಿಲಿನಿಂದ ಆದಷ್ಟು ದೂರವಿರಬೇಕು ಎಂದು ಹೇಳಿದರು.

ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಮಾತನಾಡಿ, ಕುಷ್ಠರೋಗ ಅರಿವು ಆಂದೋಲನದ ವಿವರ ನೀಡಿದರು. ಜಿಲ್ಲಾ ಕ್ಷಯ ರೋಗ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಮಾತನಾಡಿ, ನಿಕ್ಷಯ ಪೋಷಣ ಅಭಿಯಾನದಡಿ ಜಿಲ್ಲೆಯಲ್ಲಿ ಕ್ಷಯರೋಗಿಗಳಿಗೆ ಮಾಸಿಕ 1000 ರೂ. ಸಹಾಯಧನ ನೀಡಲಾಗುತ್ತಿದೆ. ದಾನಿಗಳಿಂದ ಪೌಷ್ಟಿಕಾಂಶ ಕಿಟ್ ವಿತರಿಸುವ ಗುರಿಯನ್ನು ಹೊಂದಲಾಗಿದೆ ಎಂದು ವಿವರಿಸಿದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾತನಾಡಿ, ಪ್ರಸ್ತುತ ದಿನಮಾನದಲ್ಲಿ ಆಧುನಿಕ ಜೀವನ ಶೈಲಿ ಪದ್ಧತಿಯಿಂದಾಗಿ ಜನಸಾಮಾನ್ಯರಲ್ಲಿ ಸಕ್ಕರೆ ಕಾಯಿಲೆ, ರಕ್ತದೊತ್ತಡ, ಕ್ಯಾನ್ಸರ್, ಹೃದಯಾಘಾತದಂತಹ ಕಾಯಿಲೆಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಪ್ರತಿಯೊಬ್ಬರೂ ಎಚ್ಚರಿಕೆಯಿಂದ ಇರಬೇಕಾಗಿದೆ. ಸಕ್ಕರೆ ಕಾಯಿಲೆ, ರಕ್ತದೊತ್ತಡ, ಕ್ಯಾನ್ಸರ್, ಹೃದಯಾಘಾತದಂತಹ ಸಮಸ್ಯೆಗಳು ಎದುರಾಗುವ ಮುನ್ನ ಕೆಲ ಮುನ್ಸೂಚನೆಗಳನ್ನು ನೀಡುತ್ತವೆ. ಆ ಮುನ್ಸೂಚನೆಗಳನ್ನು ಎಚ್ಚರಿಕೆ ವಹಿಸಿಕೊಂಡು ತಪಾಸಣೆಗೊಳಗಾಗುವ ಮೂಲಕ ಮುಂಜಾಗ್ರತವಾಗಿ ಚಿಕಿತ್ಸೆ ಪಡೆದುಕೊಂಡು ಮುಂದೆ ಎದುರಾಗುವ ಕಷ್ಟದಿಂದ ಪಾರಾಗಬೇಕು ಎಂದು ಎಚ್ಚರಿಸಿದರು.

> ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಜ್ಯದೆಲ್ಲೆಡೆ ಹಕ್ಕಿಜ್ವರ ಉಲ್ಬಣಗೊಂಡಿದ್ದು, ಜನಸಾಮಾನ್ಯರ ಆತಂಕಕ್ಕೆ ಕಾರಣವಾಗಿದೆ. ಹಕ್ಕಿಜ್ವರ ಹೇಗೆ ಹರಡುತ್ತದೆ, ಇದರಿಂದ ಉಂಟಾಗುವ ಪರಿಣಾಮಗಳೇನು, ಜಿಲ್ಲೆಯಲ್ಲಿ ಹಕ್ಕಿಜ್ವರ ಯಾವ ಪ್ರಮಾಣದಲ್ಲಿದೆ ಎಂಬುದರ ಕುರಿತು ಆರೋಗ್ಯ ಇಲಾಖೆಯು ಮಾಧ್ಯಮದ ಮೂಲಕ ಜನಸಾಮಾನ್ಯರಿಗೆ ಎಚ್ಚರಿಕೆ ಜೊತೆಗೆ ಅನುಸರಿಸಬೇಕಾದ ಕ್ರಮಗಳ ಕುರಿತು ಮಾಹಿತಿ ನೀಡಿದಾಗ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಮಾತನಾಡಿ, ಮಾಧ್ಯಮವು ಆರೋಗ್ಯ ಇಲಾಖೆಯ ಹಾಗೂ ಜನಸಾಮಾನ್ಯರ ಕೊಂಡಿಯಾಗಿ ಕೆಲಸ ಮಾಡುತ್ತಿದೆ. ಮಾಧ್ಯಮದವರಿಗೆ ಆರೋಗ್ಯ ಇಲಾಖೆಯ ಯೋಜನೆಗಳ ಕುರಿತು ಹಮ್ಮಿಕೊಂಡಿರುವ ಕಾರ್ಯಾಗಾರವು ಉಪಯುಕ್ತವಾಗಿದೆ ಎಂದು ಹೇಳಿದರು

ಆರೋಗ್ಯ ಇಲಾಖೆಯ ಕಾರ್ಯಕ್ರಮ ಅಧಿಕಾರಿ ಡಾ. ಅರುಂದತಿ ಹಾಗೂ ಡಾ. ಬಜಂತ್ರಿ ಇಲಾಖೆ ಯೋಜನೆಗಳ ಬಗ್ಗೆ ವಿವರಿಸಿದರು. ಆರೋಗ್ಯ ಇಲಾಖೆಯ ರೂಪಸೇನ್ ಚವ್ಹಾಣ, ಗೀತಾ ಕಾಂಬಳೆ, ಪತ್ರಕರ್ತರು, ಛಾಯಾಗ್ರಾಹಕರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

# ನ್ಯಾಯಾಲಯದ ನಿರ್ದೇಶನ ಉಲ್ಲಂಘನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆಗೆ ಫೆ. 28ರಂದು ಜರುಗಿದ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಹುದ್ದೆಗಳಿಗೆ ಆಯ್ಕೆ ಮಾಡಿ ಘೋಷಣೆ ಮಾಡಿದ ಪ್ರಕ್ರಿಯೆಯನ್ನು ಅದೇ ದಿನ ತಡೆಹಿಡಿಯಲಾಗಿದೆ ಎಂದು ಉಪವಿಭಾಗಾಧಿಕಾರಿಗಳು ತಿಳುವಳಿಕೆ ಪತ್ರ ಹೊರಡಿಸಿದ್ದಾರೆಂದು ಭಾರತೀಯ ಜನತಾ ಪಾರ್ಟಿಯ ಜಿಲ್ಲಾ ಅಧ್ಯಕ್ಷರಾದ ರಾಜು ಕುರಡಗಿ ಹಾಗೂ ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚುನಾವಣೆ ಪ್ರಕ್ರಿಯೆ ನಂತರ ಘೋಷಣೆ ಮಾಡಿದ ಅಧ್ಯಕ್ಷೆ ಕೃಷ್ಣಾ ಪರಾಪೂರ, ಉಪಾಧ್ಯಕ್ಷೆ ಶಕುಂತಲಾ ಅಕ್ಕಿ ಇವರುಗಳಿಗೆ ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠವು ಹೊರಡಿಸಿದ





ಮುಂದಿನ ಆದೇಶದವರೆಗೆ ನಗರಸಭೆಯ ಅಧಿಕಾರಭಾರ ಮತ್ತು ಯಾವುದೇ ಕಾರ್ಯಕಲಾಪ ನಡೆಸದಂತೆ ಸೂಚಿಸಿ ತಿಳುವಳಿಕೆ ಪತ್ರದಲ್ಲಿ ತಿಳಿಸಿದ್ದಾರೆ.

ಮಾನ್ಯ ಉಚ್ಚನ್ಯಾಯಾಲಯ ಧಾರವಾಡ ಪೀಠವು ಫೆ.28ರಂದು ಚುನಾವಣಾ ಪ್ರಕ್ರಿಯೆ ಪ್ರಾರಂಭವಾಗವ ಮೊದಲೇ ಮದ್ಯಾಹ್ನ 2 ಗಂಟೆ ಪೂರ್ವದಲ್ಲಿ, ಚುನಾವಣೆಯನ್ನು ಬುಧವಾರ 05-03-2025ಕ್ಕೆ ಮುಂದೂಡಲು ನಿರ್ದೇಶಿಸಿದ್ದರೂ ಕೂಡ ಕಾನೂನು ಸಚಿವರು ಚುನಾವಣಾ ಅಧಿಕಾರಿಗಳ ಒತ್ತಡ ಹೇರಿ ಉಚ್ಚ ನ್ಯಾಯಾಲಯದ ನಿರ್ದೇಶನವನ್ನು ಉಲ್ಲಂಘನೆ ಮಾಡಿ ಚುನಾವಣೆ ನಡೆಸಿದ್ದು, ನ್ಯಾಯಾಲಯಕ್ಕೆ ಅಗೌರವ ಮತ್ತು ಅಪಮಾನ ಮಾಡಿದಂತಾಗಿದೆ ಎಂದು ರಾಜು ಕುರಡಗಿ ಹಾಗೂ ವಿ.ಪ ಸದಸ್ಯ ಎಸ್.ವಿ. ಸಂಕನೂರ ತಿಳಿಸಿದ್ದಾರೆ.

# ಉಚಿತ ನೇತ್ರ ತಪಾಸಣೆ ವರದಾನ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮತಕ್ಷೇತ್ರದಲ್ಲಿ ಬೆಳ್ಳಟ್ಟಿ ಗ್ರಾಮವು ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು, ಗ್ರಾಮದ ಸುತ್ತಮುತ್ತಲಿನ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿಯ ಜನತೆಗೆ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರಗಳು ವರದಾನವಾಗಿವೆ ಎಂದು ಬೆಳ್ಳಟ್ಟಿ ಗ್ರಾ.ಪಂ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ತಿಮ್ಮರಡ್ಡಿ ಮರಡ್ಡಿ ಹೇಳಿದರು.

ಅವರು ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದಲ್ಲಿ ಶ್ರೀ ಕಂಚಿ ಕಾಮಕೋಟಿ ಮೆಡಿಕಲ್ ಟ್ರಸ್ಟ್ ಶಂಕರ ಕಣ್ಣಿನ ಆಸ್ಪತ್ರೆ ಶಿವಮೊಗ್ಗ, ಪ್ರಾಥಮಿಕ ಆರೋಗ್ಯ ಕೇಂದ್ರ ಬೆಳ್ಳಟ್ಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಗದಗ, ಜಿಲ್ಲಾ ಅಂಧತ್ವ ನಿಯಂತ್ರಣಾ ಕಾರ್ಯಕ್ರಮ ಗದಗ, ತಾಲೂಕಾ




ವೈದ್ಯಾಧಿಕಾರಿಗಳ ಕಛೇರಿ ಶಿರಹಟ್ಟಿ ಹಾಗೂ ತಿಮ್ಮರಡ್ಡಿ ಪಾ.ಮರಡ್ಡಿ ಸ್ನೇಹ ಬಳಗ, ಪ್ರಜಾಚೈತನ್ಯ ಫೌಂಡೇಶನ್ ಬೆಳ್ಳಟ್ಟಿ ಇವರ ಸಂಯುಕ್ತಾಶ್ರಯದಲ್ಲಿ ದಿ. ಹನುಮರಡ್ಡಿ ಸೋಮರಡ್ಡಿ ಮರಡ್ಡಿ ಇವರ ಸ್ಮರಣಾರ್ಥ ಉಚಿತ ನೇತ್ರ ತಪಾಸಣಾ ಮತ್ತು ಶಸ್ತ್ರ ಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಬಳಗದ ವತಿಯಿಂದ ಕಳೆದ 10 ವರ್ಷಗಳಿಂದ ಬೆಳ್ಳಟಿ ಗ್ರಾಮದಲ್ಲಿ ಇಂತಹ ಉಚಿತ ಶಿಬಿರಗಳನ್ನು ಆಯೋಜಿಸಲಾಗುತ್ತಿದ್ದು, ಈ ವರೆಗೂ ಒಂದು ಸಾವಿರಕ್ಕೂ ಅಧಿಕ ಬಡ ಕುಟುಂಬಗಳ ವಯೋವೃದ್ಧರಿಗೆ ಕಣ್ಣಿನ ಶಸ್ತ್ರಚಿಕಿತ್ಸೆ ಕಲ್ಪಿಸಲಾಗಿದೆ. ಗ್ರಾಮೀಣ ಭಾಗದಲ್ಲಿ ಈಗಾಗಲೇ ಹಲವಾರು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಉಚಿತವಾಗಿ ಆರೋಗ್ಯ ತಪಾಸಣೆ ನಡೆಸಿ ಶಸ್ತ್ರ ಚಿಕಿತ್ಸೆ ಅವಶ್ಯವಿದ್ದವರಿಗೆ ಶಸ್ತ್ರ ಚಿಕಿತ್ಸೆ ಕಲ್ಪಿಸಲಾಗಿದೆ ಎಂದರು.

ಪುಟ್ಟಯ್ಯ ಹಿರೇಮಠ ಸಾನ್ನಿಧ್ಯ ವಹಿಸಿದ್ದರು. ನಾಗರಾಜ ಕುಲಕರ್ಣಿ, ಮೋಹನ ಗುತ್ತೆಮ್ಮನವರ, ಕೊಟ್ರೇಶ ಸಜ್ಜನರ, ಮಹೇಶ ಬಡ್ನಿ, ಸುರೇಶ ಬೆಲಹುಣಸಿ, ಹೇಮಂತರಡ್ಡಿ ಅಳವಂಡಿ, ಯಲ್ಲಪ್ಪ ಒಳಗೇರಿ, ಗಿರೀಶರೆಡ್ಡಿ ಮೇಕಳಿ, ವೆಂಕಣ್ಣ ಡಂಬಳ, ವೆಂಕಟೇಶ ಬಸವರಡ್ಡಿ, ವಿಶ್ವನಾಥ ದಲಾಲಿ, ರಾಜೀವ ಮಾಂಡ್ರೆ, ಪರಸರಡ್ಡಿ ಮರಡ್ಡಿ, ಮಂಜುನಾಥ ಮಾಚೇನಹಳ್ಳಿ, ಪರಮೇಶಪ್ಪ ಕೊಡಿಹಳ್ಳಿ, ಯಲ್ಲನಗೌಡ ಪಾಟೀಲ, ಶ್ರೀನಿವಾಸ ಮರಡ್ಡಿ, ಸುರೇಶ ಬೇಂದ್ರೆ, ಅಶೋಕ ಭಾವನೂರ, ಪರಮೇಶಪ್ಪ ಬೂದಿಹಾಳ, ಸುನೀಲ ಬಣಗಾರ, ಚನ್ನವೀರಪ್ಪ ಸಜ್ಜನರ, ರಾಘು ಬಡಿಗೇರ ಮುಂತಾದವರು ಉಪಸ್ಥಿತರಿದ್ದರು.

**ಕಾಯಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಎನ್. ತಿಮ್ಮಪ್ಪ ಅಭಿಮತ**

# ಶರಣರ ವಚನಗಳನ್ನು ಪಾಲಿಸಬೇಕು

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಶರಣರ ವಚನಗಳನ್ನ ಬರೀ ಮಾತನಾಡುವದಲ್ಲ, ಅವುಗಳನ್ನು ಪಾಲಿಸುತ್ತ ಸಮಾಜದಲ್ಲಿ ಸಮಾನತೆ, ಸಹೋದರತ್ವ, ಸಾಮರಸ್ಯದ ಬೆಸುಗೆಯೊಂದಿಗೆ ಬೆರೆತಾಗ ಇತರ ಜಾತಿ-ಧರ್ಮದವರೊಂದಿಗೆ ಕೂಡಿ ಬಾಳಲು ಸಾಧ್ಯ. ಇದಕ್ಕೆ ನಮ್ಮ ವಚನ ಸಾಹಿತ್ಯ ಪರಿಷತ್ತು ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತದೆ ಎಂದು ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ತು ಬೆಂಗಳೂರು ಇದರ ರಾಜ್ಯಾಧ್ಯಕ್ಷ ಎನ್. ತಿಮ್ಮಪ್ಪ ನುಡಿದರು.

ಅವರು ನಗರದ ತಾ.ಪಂ ಸಭಾಂಗಣದಲ್ಲಿ ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ತು ಬೆಂಗಳೂರು, ತಾಲೂಕು ಮತ್ತು ಜಿಲ್ಲಾ ಘಟಕ ಕೊಪ್ಪಳ, ವಿಶಾಲ ಪ್ರಕಾಶನ ಮಾದಿನೂರು, ಸಿರಿಗನ್ನಡ ವೇದಿಕೆ ಕೊಪ್ಪಳ ಇವುಗಳ ಸಂಯುಕ್ತ ಆಶ್ರಯದಲ್ಲಿ ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ತು ನೂತನ ತಾಲೂಕು, ಜಿಲ್ಲಾ ಘಟಕದ ಉದ್ಘಾಟನೆ, ಪುಸ್ತಕ ಬಿಡುಗಡೆ ಕಾರ್ಯಕ್ರಮ, 'ಕಾಯಕ ರತ್ನ ಪ್ರಶಸ್ತಿ' ಪ್ರದಾನ ಮತ್ತು ಬಹುಮಾನ ವಿತರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.



> ಗದುಗಿನ ಭವಾನಿ ಪ್ರಿಂಟರ್ಸ್ ಮಾಲಕರಾದ ಗಣೇಶ ಪವಾರರಿಗೆ ಹಾಗೂ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 29 ಸಾಧಕರಿಗೆ 'ಕಾಯಕರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಆಧುನಿಕ ವಚನ ರಚನೆ ಸ್ಪರ್ಧೆಯಲ್ಲಿ ಭಾಗವಹಿಸಿದ 33 ವಚನಕಾರರಿಗೆ ಬಹುಮಾನ ಮತ್ತು ಪ್ರಮಾಣಪತ್ರ ವಿತರಿಸಲಾಯಿತು.

ಜಿ.ಎಸ್. ಗೋನಾಳರ ಕೃತಿಗಳನ್ನು ಲೋಕಾರ್ಪಣೆ ಮಾಡಿ ಮಾತನಾಡಿ, ಗೋನಾಳರು ತಮ್ಮ ನಿಷ್ಠುರವಾದ ಬರಹದ ಮೂಲಕ ಜನರನ್ನು ಜಾಗೃತಗೊಳಿಸುವ ಬಹು ಎತ್ತರದ ಲೇಖಕರಾಗಿದ್ದು ಅವರನ್ನು ನಾನು ಸಾಹಿತ್ಯ ಸಾಮ್ರಾಟರೆಂದೇ ಕರೆಯುತ್ತೇನೆ. ಅವರ ಪುಸ್ತಕಗಳಲ್ಲಿರುವ ವಿಷಯಗಳು ರಾಜ್ಯ ಸರಕಾರದ ಪಠ್ಯ ಪುಸ್ತಕಗಳಲ್ಲಿ ದಾಖಲಾಗಬೇಕೆಂದು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶ್ರೀ ಷ. ಬ್ರ. 108 ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳು ಹಿರೇಮಠ ಮೈನಹಳ್ಳಿ ಬಿಕ್ಕನಹಳ್ಳಿ ವಹಿಸಿಕೊಂಡಿದ್ದರು.

ಅಧ್ಯಕ್ಷತೆಯನ್ನು ಡಾ. ನಾಗರಾಜ್ ದಂಡೂತಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಚಲನಚಿತ್ರ ನಿರ್ದೇಶಕ ರಮೇಶ ಸುರ್ವೆ, ಅಬ್ದುಲ್ ರೇಹಮಾನ್ ಬಿದರಕುಂದಿ, ರುದ್ರಮ್ಮ ಆಸಿನಾಳ, ಬಸವರಾಜ ಪಾಲ್ಕಿ, ಮಹೇಶಬಾಬು ಸುರ್ವೆ, ವಿಜಯಕುಮಾರ ಕವಲೂರು ಉಪಸ್ಥಿತರಿದ್ದರು.

ಮಹಾಂತಯ್ಯ ಶಾಸ್ತ್ರಿ ಮತ್ತು ಕನಕಾಪುರ ಶಾಲೆಯ ಮಕ್ಕಳು ವಚನ ಗಾಯನಕ್ಕೆ ನೃತ್ಯ ರೂಪಕವನ್ನು ಮಾಡಿದರು.

ಪ್ರಾಸ್ತಾವಿಕವಾಗಿ ಪ್ರೊ. ಶರಣಬಸಪ್ಪ ಬಿಳೆಯಲೆ ಮಾತನಾಡಿದರು. ಡಾ. ಶಿವಬಸಪ್ಪ ಮಸ್ಕಿ ಸ್ವಾಗತಿಸಿದರು, ಉಮೇಶ ಸುರ್ವೆ ಮತ್ತು ಸುರೇಶ ಕುಂಬಾರ ನಿರೂಪಿಸಿದರು. ಮೈಲಾರೆಪ್ಪ ಉಂಕಿ ವಂದಿಸಿದರು.

# ಗ್ರಾಮದ ಅಭಿವೃದ್ಧಿ ನಮ್ಮ ಕನಸಾಗಬೇಕು

**■ವಿಜಯಸಾಕ್ಷಿ ಸುದ್ದಿ, ಅಬ್ಬಿಗೇರಿ**

ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಣೆ ಮಾಡುವುದು ನಮ್ಮ ನಿಮ್ಮೆಲ್ಲರಿಗೆ ಸಿಕ್ಕ ಸದವಕಾಶವಾಗಿದೆ. ಗ್ರಾಮದ ಅಭಿವೃದ್ಧಿಗಾಗಿ ನಮ್ಮ ನಿರಂತರ ಪರಿಶ್ರಮವನ್ನು ಹಾಕಿ ಗ್ರಾಮದ ಅಭಿವೃದ್ಧಿಯ ಕನಸು ಕಾಣಬೇಕು. ಅಂದಾಗ ಮಾತ್ರ ಗ್ರಾ.ಪಂ ನೌಕರರು ಜನ ಸಾಮಾನ್ಯರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಅಡಿಯಲ್ಲಿ ಬರುವ ಯೋಜನೆಗಳ ಮಹಾಪೂರವನ್ನು ಹರಿಸಬಹುದು ಎಂದು ಅಬ್ಬಿಗೇರಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಲೋಹಿತ ಎಂ ಅಭಿಪ್ರಾಯ ವ್ಯಕ್ತಪಡಿಸಿದರು. ಅಬ್ಬಿಗೇರಿ ಗ್ರಾ.ಪಂನಲ್ಲಿ ಅಂಧತ್ವವುಳ್ಳ ಅಧಿಕಾರಿ/ಸಿಬ್ಬಂದಿಗಳಿಗಾಗಿ ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ತನ್ನಿಮಿತ್ತ ಅಬ್ಬಿಗೇರಿ ಗ್ರಾಮಕ್ಕೆ ಅಬ್ದುಲ್ ನಜೀರಸಾಬ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಸಂಸ್ಥೆಯ ಪ್ರಾದೇಶಿಕ ಕೇಂದ್ರ ರಾಯಪೂರ-ಧಾರವಾಡ ಹಮ್ಮಿಕೊಂಡಿದ್ದ ಕ್ಷೇತ್ರ ಭೇಟಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷರಾದ ಲಲಿತಾ ರಾಠೋಡ, ಉಪಾಧ್ಯಕ್ಷರಾದ ಅಕ್ಕಮ್ಮ ಡೊಳ್ಳಿನ ಸದಸ್ಯರಾದ ಬಸಪ್ಪ ಕಮ್ಮಾರ, ಶಂಕ್ರಪ್ಪ ಇಟಗಿ, ದೇವಪ್ಪ ಜಂತ್ಲಿ, ಮಂಜುಳಾ ತಳವಾರ, ರೇಖಾ ಅವರೆಡ್ಡಿ, ವಿಜಯಲಕ್ಷ್ಮೀ ಬಸವರೆಡ್ಡೇರ, ರೇಣಮ್ಮ ಹಳ್ಳಿ, ರೇಖಾ ವೀರಾಪೂರ, ಮಾಳಶೆಟ್ಟಿ, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮದ ಗ್ರಂಥಪಾಲಕರಾದ ವಿರೇಶ ಬಳಿಗೇರ ಸೇರಿದಂತೆ ತರಬೇತಿದಾರರು ಹಾಜರಿದ್ದರು.

ಕರ್ನಾಟಕ ಸರಕಾರ

## ಗ್ರಾಮ ಪಂಚಾಯತ ಕಾರ್ಯಾಲಯ ಕುರಡಗಿ

ತಾಲೂಕ : ರೋಣ  e-mail : kuradagi.ron.gdg@gmail.com  ಜಿಲ್ಲಾ : ಗದಗ

ನಂ: ಗ್ರಾ.ಪಂ. ಕುರಡಗಿ/ಟೆಂಡರ/2024-25/323  ದಿನಾಂಕ:03-03-2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತೇದಾರ/ಸರಬುದಾರ ರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ 02 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ MGNREGA ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ. | ಇಂಡೆಂಟ್ ನಂಬರ | ಟೆಂಡರಿಗಿಟ್ಟ ಮೊತ್ತ |
|---|---|---|
| 1 | RDPR/2024-25/IND8050 | ರೂ. 435020.00 |
| 2 | RDPR/2024-25/IND8051 | ರೂ. 435020.00 |

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ, ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ:-03-03-2025 ರಿಂದ 11-03-2025 ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ: 12-03-2025 ರಂದು 16.30 ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತ ಕುರಡಗಿ
ತಾಲೂಕ: ರೋಣ ಜಿಲ್ಲಾ : ಗದಗ.

# ಹಗಲು ವೇಷ ಕಲಾವಿದ ಡಾ. ಗೋವಿಂದಪ್ಪಗೆ ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ದೇವಿಹಾಳ ಗ್ರಾಮದ ಡಾ. ಗೋವಿಂದಪ್ಪ ರಾಮಚಂದ್ರಪ್ಪ ವೇಷಗಾರ ಅವರು ಹಗಲು ವೇಷ ಕಲಾವಿದರಾಗಿದ್ದು, 2024ನೇ ಸಾಲಿನ ಕರ್ನಾಟಕ ಜಾನಪದ ಅಕಾಡೆಮಿ ವಾರ್ಷಿಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ರಾಜ್ಯದ 30 ಜಿಲ್ಲೆಗಳಿಂದ 30 ಹಿರಿಯ ಜಾನಪದ ಕಲಾವಿದರಿಗೆ ವಾರ್ಷಿಕ ಗೌರವ ಪ್ರಶಸ್ತಿ, ಇಬ್ಬರು ಜಾನಪದ ತಜ್ಞರಿಗೆ ತಜ್ಞ ಪ್ರಶಸ್ತಿ ನೀಡಲಾಗುವುದು. ಕಲಾವಿದರಿಗೆ ನೀಡುವ



ಗೌರವ ಪ್ರಶಸ್ತಿಯ ಮೊತ್ತ ರೂ. 25,000 ಮತ್ತು ಇಬ್ಬರು ಕ್ಷೇತ್ರ ತಜ್ಞರಿಗೆ ತಲಾ ರೂ. 50,000/-ಗಳು ಪ್ರಶಸ್ತಿ ಮೊತ್ತದ ಜೊತೆಗೆ ಸ್ಮರಣಿಕೆ, ಶಾಲು, ಹಾರ, ಫಲ ತಾಂಬೂಲ ನೀಡಿ ಗೌರವಿಸಲಾಗುವುದು. ಬೆಂಗಳೂರಿನಲ್ಲಿ ನಡೆದ ಸರ್ವಸದಸ್ಯರ ಸಭೆಯಲ್ಲಿ ತೀರ್ಮಾನಿಸಿದಂತೆ ಜಾನಪದ ಕಲಾವಿದರ ಮತ್ತು ತಜ್ಞರನ್ನು 2024 ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಹಾಗೂ ತಜ್ಞ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿ ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka